ಸಂಪುಟ : 9 ಸಂಚಿಕೆ 86 ಪುಟ : 4 ಬೆಲೆ: 3.00 ರವಿವಾರ ಮೇ 5 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 86 Pages : 4 Price : 3.00 Sunday May 5 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ । ಸುಗಮ, ಶಾಂತಿಯುತ ಮತದಾನಕ್ಕೆ ಎಲ್ಲರೂ ಸಹಕರಿಸಲು ಮನವಿ

# ಲೋಕಸಭಾ ಚುನಾವಣೆಗೆ ಜಿಲ್ಲಾಡಳಿತದಿಂದ ಅಗತ್ಯ ಸಿದ್ಧತೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮೇ 7 ರಂದು ನಡೆಯುವ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಜಿಲ್ಲಾಡಳಿತ ಅಗತ್ಯ ಸಿದ್ಧತೆ ಮಾಡಿಕೊಂಡಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯ ನ್ಯಾಯಾಲಯ ಸಭಾಂಗಣದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಒಟ್ಟು 8,90,768 ಮತದಾರರಿದ್ದು, 4,44,185 ಪುರುಷರು ಮತ್ತು 4,46,522 ಮಹಿಳಾ ಮತದಾರರು, 61 ಇತರ ಮತದಾರರು ಇದ್ದಾರೆ. ಒಟ್ಟೂ 961 ಮತಗಟ್ಟೆಗಳಿದ್ದು, 4232 ಮತಗಟ್ಟೆ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಇವರಲ್ಲಿ 1058 ಪಿಆರ್‌ಒ, 1058 ಎಪಿಆರ್‌ಒ ಮತ್ತು 2116 ಪಿಓಗಳಿದ್ದಾರೆ ಎಂದು ವಿವರಿಸಿದರು.

ಮತದಾನಾಧಿಕಾರಿಗಳು ತಾವು ಕರ್ತವ್ಯ ನಿರ್ವಹಿಸುತ್ತಿರುವ ಕ್ಷೇತ್ರದಿಂದ ಹೊರಗಡೆ ನಿಯೋಜಿಸಲ್ಪಟ್ಟಿದಲ್ಲಿ, ಆ ವಿಧಾನಸಭಾ ಕ್ಷೇತ್ರಗಳಿಗೆ ತಲುಪಲು ಸಾರಿಗೆ ಬಸ್‌ಗಳ ವ್ಯವಸ್ಥೆಯನ್ನು ಮಾಡಲಾಗಿದೆ. ಸಂಬಂಧಪಟ್ಟ ಮಸ್ಟರಿಂಗ್ ಕೇಂದ್ರಗಳಿಂದ ಮೇ 6ರಂದು ಬೆಳಗ್ಗೆ 6 ಗಂಟೆಗೆ ಬಸ್‌ಗಳು ಹೊರಡಲಿವೆ.

ಲೋಕಸಭಾ ಚುನಾವಣೆ ಸಂಬಂಧ ಶಿರಹಟ್ಟಿಯ ಎಫ್.ಎಂ. ಡಬಾಲಿ ಪಿ.ಯು ಕಾಲೇಜು, ಗದಗ ನಗರದ ಗುರುಬಸವ ಸಿ.ಬಿ.ಎಸ್.ಇ ಶಾಲೆ, ರೋಣದ ಡಿಪೌಲ್ ಅಕಾಡೆಮಿ ಮತ್ತು ನರಗುಂದದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಕೇಂದ್ರಗಳಲ್ಲಿ ಮಸ್ಟರಿಂಗ್



ಮತ್ತು ಡಿಮಸ್ಟರಿಂಗ್ ಕಾರ್ಯ ನಡೆಯಲಿದೆ. ಗದಗ ಜಿಲ್ಲೆಯ ಮತಗಟ್ಟೆ ಅಧಿಕಾರಿಗಳಿಗೆ ಮತಗಟ್ಟೆಗಳಿಗೆ ತಲುಪಲು ಜಿಲ್ಲೆಯಲ್ಲಿ ಒಟ್ಟು 189 ಮಾರ್ಗಗಳನ್ನು ಗುರುತಿಸಲಾಗಿದ್ದು, ಈ ಮಾರ್ಗಗಳಲ್ಲಿ ಕೆಎಸ್‌ಆರ್‌ಟಿಸಿ ಬಸ್ಸು, ಜೀಪ್‌ಗಳು ಹಾಗೂ ಮಿನಿ ಬಸ್‌ಗಳನ್ನು ಬಳಸಿಕೊಳ್ಳಲಾಗುತ್ತದೆ ಎಂದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮತ್ತು ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಸಿ.ಆರ್.ಪಿ.ಸಿ ಸೆಕ್ಷನ್ 144 ಅನ್ನು ಮೇ 5ರ ಸಂಜೆ 6 ಗಂಟೆಯಿಂದ ಜಾರಿ ಮಾಡಲಾಗಿದ್ದು, ಈ ಸಮಯದಲ್ಲಿ 5 ಜನಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಗುಂಪು ಸೇರುವಂತಿಲ್ಲ. ಇದು ಚುನಾವಣಾ ಪ್ರಚಾರಕ್ಕೆ ತೆರಳುವವರಿಗೆ ಅನ್ವಯಿಸುವುದಿಲ್ಲ. ಮೇ 5ರಂದು ಸಂಜೆ 6ರಿಂದ ಮೇ 8ರ ಬೆಳಗ್ಗೆ 6 ಗಂಟೆವರೆಗೆ ಜಿಲ್ಲೆಯಾದ್ಯಂತ ಮದ್ಯ ಮಾರಾಟ ನಿಷೇಧಿತ ದಿನ (ಆಡಿಥಿ ಆಚಿಥಿ) ಎಂದು ಘೋಷಿಸಲಾಗಿದೆ. ಹಾಗೆಯೇ ಮೇ 7ರಂದು ನಡೆಯುವ ಎಲ್ಲಾ ಸಂತೆ ಜಾತ್ರೆ ಮತ್ತು ಉತ್ಸವಗಳನ್ನು ಮುಂದೂಡಿ ಆದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಮತದಾನ ಎಲ್ಲರ ಸಾಂವಿಧಾನಕ ಹಕ್ಕು. ಮೇ 7ರಂದು ನಡೆಯಲಿರುವ ಮತದಾನದ ದಿನದಂದು ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡುವಂತೆ ಹಾಗೂ ಸಾರ್ವಜನಿಕರು, ಅಭ್ಯರ್ಥಿಗಳು, ಚುನಾವಣಾ ಏಜೆಂಟರು ಹಾಗೂ ಮಾಧ್ಯಮ ಪ್ರತಿನಿಧಿಗಳು ಚುನಾವಣೆ ಪ್ರಕ್ರಿಯೆಯನ್ನು ಶಾಂತಿಯುತವಾಗಿ ಮತ್ತು ಸುಗಮವಾಗಿ ನಡೆಸಲು ಅಗತ್ಯ ಸಹಕಾರ ನೀಡುವಂತೆ ಜಿಲ್ಲಾಧಿಕಾರಿಗಳು ಕೋರಿದರು.

ಜಿ.ಪಂ.ಸಿಇಒ ಎಸ್ ಭರತ್ ಮಾತನಾಡಿ, ಎಲ್ಲಾ ಮತಗಟ್ಟೆಗಳಿಗೆ ವಿಲ್‌ಚೇರ್ ಹಾಗೂ ಬೂತಗನ್ನಡಿ ( ಮ್ಯಾಗ್ನಿಫೈಯಿಂಗ್) ಸರಬರಾಜು ಮಾಡಲು ಕ್ರಮವಹಿಸಲಾಗಿದೆ. ಅಂಗವಿಕಲರು ಮತ್ತು ಹಿರಿಯ ನಾಗರಿಕರಿಗೆ ಮತಗಟ್ಟೆಗೆ ಬರಲು ಅನುಕೂಲವಾಗುವಂತೆ ವಾಹನದ ವ್ಯವಸ್ಥೆಯನ್ನು ಮಾಡಲಾಗುತ್ತಿದೆ. ದೃಷ್ಟಿ ದೋಷವುಳ್ಳವರಿಗೆ ಸಹಾಯವಾಗಲು ಬ್ರೈಲ್ ಬ್ಯಾಲೆಟ್ ಪೇಪರ್ ಸಹ ಪ್ರತಿ ಮತಗಟ್ಟೆಗೆ ಸರಬರಾಜು ಮಾಡಲಾಗಿದೆ ಎಂದು ವಿವರಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಲೋಕಸಭಾ ಸಾರ್ವತ್ರಿಕ ಚುನಾವಣೆ ಸಂಬಂಧ ಶಾಂತಿಯುತ ಚುನಾವಣೆಗೆ ಅಗತ್ಯ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಮತದಾರರು ನಿರ್ಭೀತಿಯಿಂದ ಮತ ಚಲಾಯಿಸಲು ಪೊಲೀಸ್ ಇಲಾಖೆ ಅಗತ್ಯ ಸಿದ್ಧತೆ ಮಾಡಿಕೊಂಡಿದೆ. ಸೂಕ್ಷ್ಮ, ಅತೀ ಸೂಕ್ಷ್ಮ ಮತಗಟ್ಟೆಗಳಲ್ಲಿ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಮಾಡಿಕೊಳ್ಳಲಾಗಿದೆ ಎಂದು ಹೇಳಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ ಇದ್ದರು.

### ಚುನಾವಣಾ ಬಹಿರಂಗ ಪ್ರಚಾರ ಅಂತ್ಯ

ಮೇ 7ರಂದು ನಡೆಯಲಿರುವ ಲೋಕಸಭಾ ಚುನಾವಣೆ ಸಂಬಂಧ ಮತದಾನ ಅಂತ್ಯಗೊಳ್ಳುವುದಕ್ಕೆ ನಿಗದಿಯಾಗಿರುವ ಸಮಯದ 48 ಗಂಟೆಗಳ ಮೊದಲು ಎಲ್ಲಾ ರೀತಿಯ ಬಹಿರಂಗ ಪ್ರಚಾರ ನಿಷೇಧಿಸಿರುವುದರಿಂದ ಬಹಿರಂಗ ಪ್ರಚಾರ ಮೇ 5ರ ಸಂಜೆ 6 ಗಂಟೆಗೆ ಅಂತ್ಯಗೊಳ್ಳಲಿದೆ. ಈ 48 ಗಂಟೆಗಳ ಅವಧಿಯಲ್ಲಿ ಚುನಾವಣೆ ಫಲಿತಾಂಶದ ಮೇಲೆ ಪರಿಣಾಮ ಬೀರುವ ಎಲ್ಲಾ ರೀತಿಯ ಬಹಿರಂಗ ಪ್ರಚಾರ ಟೆಲಿವಿಷನ್/ರೇಡಿಯೋ ಹಾಗೂ ಕೇಬಲ್ ನೆಟ್‌ವರ್ಕ್, ಸೋಷಿಯಲ್ ಮೀಡಿಯಾ ಇಂತಹ ಇತರೆ ಮಾಧ್ಯಮದಲ್ಲಿ ಚುನಾವಣಾ ವಿಷಯ ಚರ್ಚೆ, ಪ್ರಚಾರ, ಸಂದರ್ಶನ, ಜಾಹೀರಾತು ಹಾಗೂ ಚುನಾವಣೆ ಸಂಬಂಧಿತ ಅಭಿಪ್ರಾಯಗಳ ಪ್ರಸಾರಗಳು ನಿಷೇಧಕ್ಕೆ ಒಳಪಡಲಿವೆ.

### ವಿದ್ಯುನ್ಮಾನ ಮತಯಂತ್ರಗಳು

ಗದಗ ಜಿಲ್ಲೆಗೆ ಸಂಬಂಧಿಸಿದಂತೆ ಮೀಸಲು ಮತಯಂತ್ರಗಳು ಸೇರಿದಂತೆ ವಿದ್ಯುನ್ಮಾನ ಮತಯಂತ್ರಗಳನ್ನು ಉಪಯೋಗಿಸುತ್ತಿದ್ದು, ಈ ವಿದ್ಯುನ್ಮಾನ ಮತಯಂತ್ರಗಳನ್ನು ಇ.ಸಿ.ಐ.ಎಲ್ ಸಂಸ್ಥೆಯ ಇಂಜಿನಿಯರ್‌ಗಳಿಂದ ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮೊದಲನೇ ಹಂತದ ಪರಿಶೀಲನೆ ನಡೆಸಿ, ಮತದಾನಕ್ಕೆ ಯೋಗ್ಯವಾಗಿದೆ ಎಂದು ದೃಢೀಕರಿಸಿರುತ್ತಾರೆ. ವಿದ್ಯುನ್ಮಾನ ಮತಯಂತ್ರಗಳನ್ನು ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಮಾಡಲಾಗಿದ್ದು, ವಿಧಾನಸಭಾ ಕ್ಷೇತ್ರದಲ್ಲಿ ಸ್ಥಾಪಿಸಿರುವ ಭದ್ರತಾ ಕೊಠಡಿಯಲ್ಲಿ ಅಭ್ಯರ್ಥಿಗಳು/ಅವರ ಏಜೆಂಟರು/ ಅಧಿಕೃತ ವ್ಯಕ್ತಿಗಳ ಸಮ್ಮುಖದಲ್ಲಿ ಮತಯಂತ್ರಗಳನ್ನು ಸಿದ್ಧಪಡಿಸುವ ಕಾರ್ಯವನ್ನು ಪೂರ್ಣಗೊಳಿಸಲಾಗಿರುತ್ತದೆ. ವಿದ್ಯುನ್ಮಾನ ಮತಯಂತ್ರದ ಸಿದ್ಧತೆ ಸಂಬಂಧ ಎಲ್ಲಾ ಪ್ರಕ್ರಿಯೆನ್ನು ಸಿ.ಸಿ ಟಿ.ವಿ ಚಿತ್ರೀಕರಣ/ವಿಡಿಯೋ ಚಿತ್ರೀಕರಣ ಮಾಡಿಸಲಾಗಿದೆ.

### ಮತಗಟ್ಟೆಗಳಲ್ಲಿ ಮೊಬೈಲ್ ಫೋನ್ ನಿಷೇಧ

ಮತದಾನದ ದಿನದಂದು ಮತದಾರರು ಮೊಬೈಲ್ ಫೋನ್‌ಗಳನ್ನಾಗಲೀ ಅಥವಾ ಕ್ಯಾಮರಾಗಳನ್ನಾಗಲೀ ಮತಗಟ್ಟೆಗಳಿಗೆ ತೆಗೆದುಕೊಂಡು ಹೋಗುವಂತಿಲ್ಲ. ಪ್ರಜಾಪ್ರಾತಿನಿಧ್ಯ ಅಧಿನಿಯಮ 1951ರ ಸೆಕ್ಷನ್ 128 ಮತ್ತು ಚುನಾವಣೆ ನಡೆಸುವ ನಿಯಮ 39ರಂತೆ ಮೊಬೈಲ್ ಫೋನ್‌ಗಳನ್ನು ಮತ್ತು ಕ್ಯಾಮರಾಗಳನ್ನು ತೆಗೆದುಕೊಂಡು ಛಾಯಾಚಿತ್ರಗಳನ್ನು ತೆಗೆಯುವುದು ಮತದಾನದ ರಹಸ್ಯ ಉಲ್ಲಂಘಿಸಿದಂತಾಗುತ್ತದೆ. ಆದ್ದರಿಂದ ಮತದಾರರ ಮತಗಟ್ಟೆಗಳಿಗೆ ಮೊಬೈಲ್ ಫೋನ್ ಅಥವಾ ಕ್ಯಾಮರಾಗಳನ್ನು ತೆಗೆದುಕೊಂಡು ಹೋದಲ್ಲಿ ಇವುಗಳನ್ನು ಅಧ್ಯಕ್ಷಾಧಿಕಾರಿಗಳು ಪರಿಶೀಲಿಸಿ ವಶಪಡಿಸಿಕೊಳ್ಳುವರು.

## ವಿಶ್ವಗುರು ಬಸವಣ್ಣನವರ ಕುರಿತು ಉಪನ್ಯಾಸ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಮೇ 5ರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1592ನೇ ಶರಣ ಸಂಗಮದಲ್ಲಿ 'ಕರ್ನಾಟಕ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ 919ನೇ ಜಯಂತಿ' ಕುರಿತು ಉಪನ್ಯಾಸ ಬಸವದಳ, ಶರಣ ಸಹಿತ್ಯ ಪರಿಷತ್ತು, ಜಿಲ್ಲಾ ಜಾಗತಿಕ ಲಿಂಗಾಯತ ಮಹಾಸಭೆ ಗದಗ ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ, ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಅಖಿಲ ಭಾರತ ವಚನ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಿಷತ್ತು ಜಿಲ್ಲಾ ಘಟಕದ ಅಧ್ಯಕ್ಷ ಡಾ. ರಾಜೇಂದ್ರ ಎಸ್. ಗಡಾದ ಉಪನ್ಯಾಸ ಮಾಡುವರು. ಅತಿಥಿಗಳಾಗಿ ಶರಣ ಬಸವರಾಜ ಟಿ.ಹಿರೇಹಡಗಲಿ ಆಗಮಿಸುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಕಸಾಪ ಸಂಸ್ಥಾಪನಾ ದಿನಾಚರಣೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಮೇ 5ರಂದು ಬೆಳಿಗ್ಗೆ 10 ಗಂಟೆಗೆ ಕಸಾಪ ಕಾರ್ಯಾಲಯದ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ 110ನೇ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಉಪನ್ಯಾಸ ಹಾಗೂ ಸಂಮಾನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಜನಸಾಮಾನ್ಯರತ್ತ ಕನ್ನಡ ಸಾಹಿತ್ಯ ಪರಿಷತ್ತು ಎಂಬ ವಿಷಯವಾಗಿ ಪರಿಷತ್ತಿನ ಗೌರವ ಕಾರ್ಯದರ್ಶಿ ಶಿವಾನಂದ ಗಿಡ್ನಂದಿ ಉಪನ್ಯಾಸ ನೀಡುವರು. ಮುಂಡರಗಿ ತಾಲೂಕಾ ಕಸಾಪ ಅಧ್ಯಕ್ಷ ಪ್ರೊ. ಎಂ.ಜಿ. ಗಚ್ಚಣ್ಣವರ ಅವರಿಗೆ ಸನ್ಮಾನ ಜರುಗಲಿದೆ. ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ. ರಶ್ಮಿ ಅಂಗಡಿ ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿ ಮಾನಿಗಳು, ಪರಿಷತ್ತಿನ ಸದಸ್ಯರು ಪಾಲ್ಗೊಳ್ಳಬೇಕೆಂದು ಕಾರ್ಯದ ರ್ಶಿಗಳಾದ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.




ಗದಗ : ಜಿಲ್ಲಾಡಳಿತ, ಜಿ.ಪಂ., ನಗರಸಭೆ ಹಾಗೂ ಸ್ವೀಪ್ ಸಮಿತಿ ವತಿಯಿಂದ ಮತದಾನದ ಮಹತ್ವ ಕುರಿತು ಪಂಜಿನ ಮೆರವಣಿಗೆ ಮೂಲಕ ಜಾಗೃತಿ ಅಭಿಯಾನವು ಶನಿವಾರ ನಡೆಯಿತು. ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿ.ಪಂ.ಸಿಇಒ ಎಸ್.ಭರತ್, ಜಿ.ಪಂ.ಉಪ ಕಾರ್ಯದರ್ಶಿ ಸಿ.ಬಿ.ದೇವರಮನಿ, ನಗರಸಭೆ ಪೌರಾಯುಕ್ತರಾದ ಪ್ರಶಾಂತ್ ವರಗಪ್ಪನವರ ಇತರರು ಇದ್ದರು.

### ಹೆಗಲ ಮೇಲೆ ಕಂಬಳಿ ಹಾಕಿಕೊಂಡ ಮೇಲೆ ಪ್ರಾಮಾಣಿಕರಾಗಿ ಇರಬೇಕು: ಬಸವರಾಜ ಬೊಮ್ಮಾಯಿ

# ರಾಜ್ಯದಲ್ಲಿ ಒಂದೇ ವರ್ಷದಲ್ಲಿ ರೈತಪರ ಸರ್ಕಾರ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಕೇಂದ್ರದಲ್ಲಿ ಮೋದಿ ಪ್ರಧಾನಿಯಾದರೆ ಒಂದೇ ವರ್ಷದಲ್ಲಿ ರಾಜ್ಯದಲ್ಲಿ ರೈತಪರ ಸರ್ಕಾರ ಬರಲಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಭವಿಷ್ಯ ನುಡಿದಿದ್ದಾರೆ.

ಅವರು ಜಿಲ್ಲೆಯ ರಾಣೆಬೆನ್ನೂರು ತಾಲೂಕಿನ ಹಲಗೇರಿ, ಗ್ರಾಮಗಳಲ್ಲಿ ಚುನಾವಣಾ ಪ್ರಚಾರ ನಡೆಸಿ ಮಾತನಾಡಿದರು.

ಹೆಗಲ ಮೇಲೆ ಕಂಬಳಿ ಹಾಕಿಕೊಂಡ ಮೇಲೆ ಪ್ರಾಮಾಣಿಕರಾಗಿ ಇರಬೇಕು. ನಾನು ಸಿಎಂ ಇದ್ದಾಗ ಕುರಿಗಾರರ ಸಂಘಗಳ ಮೂಲಕ ಕುರಿ ಖರೀದಿಗೆ ಎಂಟು ಲಕ್ಷ ರೂ ಕೊಡುವ 260 ಕೋಟಿ ರೂ. ಯೋಜನೆ ಮಾಡಿದ್ದೆ ಈ ಸರ್ಕಾರ ಬಂದು ಅದನ್ನು ನಿಲ್ಲಿಸಿದೆ ಎಂದು ಆರೋಪಿಸಿದರು.

ನಮ್ಮ ಸರ್ಕಾರದ ಅವಧಿಯಲ್ಲಿ ಕುರಿಗಾರರ ಅನುಕೂಲಕ್ಕಾಗಿ ಮಾಡಿದ ಯೋಜನೆಯನ್ನು ಈ ಸರ್ಕಾರ ನಿಲ್ಲಿಸಿದೆ. ಆ ಯೋಜನೆಯನ್ನು ರಾಜ್ಯ ಸರ್ಕಾರ ಜಾರಿಗೊಳಿಸದಿದ್ದರೆ ನಾನು ಕೇಂದ್ರ ಸರ್ಕಾರದಿಂದ ಯೋಜನೆ ಜಾರಿ ಮಾಡಿ ಹಾಲುಮತ ಸಮುದಾಯಕ್ಕೆ ಅನುಕೂಲ ಮಾಡಿಕೊಡುತ್ತೇನೆ ಎಂದು ಹೇಳಿದರು.



ರಾಜ್ಯ ಮತ್ತು ಕೇಂದ್ರದಲ್ಲಿ ರೈತರ ಪರ ಸರ್ಕಾರ ಬರಬೇಕು. ಕೇಂದ್ರದಲ್ಲಿ ಮೋದಿ ಪ್ರಧಾನಿಯಾದರೆ ಒಂದೇ ವರ್ಷದಲ್ಲಿ ರಾಜ್ಯದಲ್ಲಿ ರೈತಪರ ಸರ್ಕಾರ ಬರಲಿದೆ. ರಾಣೆಬೆನ್ನೂರಿನಲ್ಲಿ ಎರಡು ಏತ ನೀರಾವರಿ ಯೋಜನೆಗಳನ್ನು ಮಾಡಿದ್ದೇವೆ. ರಾಣೆಬೆನ್ನೂರಿಗೆ ಮೆಗಾ ಮಾರ್ಕೆಟ್ ಮಾಡಿದ್ದೇವೆ. ಅಮೃತ ಯೋಜನೆ ಅಡಿಯಲ್ಲಿ ದಿನದ ಇಪ್ಪತ್ತು ನಾಲ್ಕು ಗಂಟೆ ನೀರು ನೀಡುವ ಯೋಜನೆ ಮಾಡಿದ್ದೇವೆ ಎಂದರು.

ಕಳೆದ ಎಪ್ಪತ್ತೈದು ವರ್ಷದಲ್ಲಿ ಇಷ್ಟು ಜನ ಪ್ರಧಾನಿಗಳು ಬಂದಿದ್ದಾರೆ. ಯಾರೂ ಮನೆಗಳಿಗೆ ನಲ್ಲಿ ನೀರು ಕೊಡುವ ಯೋಚನೆ ಮಾಡಿಲ್ಲ. ಮೋದಿಯವರು ನಾಲ್ಕು ವರ್ಷದಲ್ಲಿ 75 ಕೋಟಿ ಮನೆಗಳಿಗೆ ನೀರು ನೀಡಿದ್ದಾರೆ. ರಾಜ್ಯದಲ್ಲಿ ಮೊದಲು 30 ಲಕ್ಷ ಮನೆಗಳಿಗೆ ನಲ್ಲಿ ಸಂಪರ್ಕ ಇತ್ತು. ನಾವು ಬಂದ ಮೇಲೆ 70 ಲಕ್ಷ ಮನೆಗಳಿಗೆ ನೀರು ನಿಡಿದ್ದೇವೆ. ಹಾವೇರಿಯಲ್ಲಿ ಹಾಲು ಒಕ್ಕೂಟ ಮಾಡಿರುವುದರಿಂದ 80 ಸಾವಿರ ಲೀಟರ್‌ನಿಂದ 1.20 ಲಕ್ಷ ಲೀಟರ್ ಗೆ ಏರಿದೆ. ನಾವು ಬೇರೆ ಒಕ್ಕೂಟಕ್ಕಿಂತ ಮೂರು ರೂ. ಹೆಚ್ಚಿಗೆ ನೀಡುತ್ತಿದ್ದೇವೆ. ಇದರಿಂದ ಹಾಲು ಉತ್ಪಾದನೆ ಹೆಚ್ಚಾಗಿದೆ. ಹಾವೇರಿಗೆ ಮೆಡಿಕಲ್ ಕಾಲೇಜು, ಲಾ ಕಾಲೇಜು, ಹೈವೆ ಎಲ್ಲವನ್ನು ಮಾಡಿದ್ದೇವೆ ಎಂದರು.

▸▸ 3ನೇ ಪುಟಕ್ಕೆ

### ಶಾಸಕರು ಹೋರಿಯೂ ಅಲ್ಲ ಎತ್ತೂ ಅಲ್ಲ

ರಾಣೆಬೆನ್ನೂರು ಶಾಸಕರು ಹೋರಿಯೂ ಅಲ್ಲ ಎತ್ತೂ ಅಲ್ಲ ಎಂದು ಮಾಜಿ ಸಿಎಂ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ರಾಣೆಬೆನ್ನೂರು ಶಾಸಕ ಪ್ರಕಾಶ್ ಕೋಳಿವಾಡ ಅವರಿಗೆ ತಿರುಗೇಟು ನೀಡಿದ್ದಾರೆ.

ಕಷ್ಟ ಕಾಲದಲ್ಲಿ ಹಳೆಯ ಎತ್ತನ್ನೇ ಹೂಡಬೇಕು. ಸಾಮಾನ್ಯ ಜನರಿಗೆ ಗೊತ್ತಿರುವ ವಿಷಯ ಇಲ್ಲಿನ ಶಾಸಕರಿಗೆ ಗೊತ್ತಿಲ್ಲ. ಕಾಂಗ್ರೆಸ್ ನವರು ಎಂಬತ್ತು ವರ್ಷ ಆದವರು ಚುನಾವಣೆಗೆ ನಿಲ್ಲುತ್ತಾರೆ. ಅವರ ಬಗ್ಗೆ ಮಾತನಾಡಿದರೆ ನೋವಾಗುತ್ತದೆ ಎನ್ನುವ ಪರಿಜ್ಞಾನ ಇರಬೇಕು. ಸ್ವಲ್ಪ ಯೋಚನೆ ಮಾಡಿ ಮಾತನಾಡಬೇಕು ಎಂದು ಶಾಸಕರಿಗೆ ತಿರುಗೇಟು ನೀಡಿದರು.

### 'ಪ್ರಜಾಧ್ವನಿ ಯಾತ್ರೆ' ಸಮಾವೇಶದಲ್ಲಿ ಡಿಸಿಎಂ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ

# ಜನಾಶೀರ್ವಾದದಿಂದ ಕಾಂಗ್ರೆಸ್ ಅಧಿಕಾರದಲ್ಲಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ಗದಗ ಜಿಲ್ಲೆಗೆ ಬಂದಾಗ ಕಮಲ ಕೆರೆಯಲ್ಲಿದ್ದರೆ ಚೆಂದ, ತೆನೆ ಹೊಲದಲ್ಲಿದ್ದರೆ ಚಂದ, ದಾನ–ಧರ್ಮ ಮಾಡುವ ಕೈ ಅಧಿಕಾರದಲ್ಲಿದ್ದರೆ ಮಾತ್ರ ಚಂದ ಎಂದಿದ್ದೆ. ಆ ಪ್ರಕಾರ ಜನರ ಆಶೀರ್ವಾದದಿಂದ ಇಂದು ಕಾಂಗ್ರೆಸ್ ಅಧಿಕಾರದಲ್ಲಿದೆ. ಅಧಿಕಾರಕ್ಕೆ ಬಂದ 1 ಗಂಟೆಯಲ್ಲಿ ನುಡಿದಂತೆ ನಡೆದಿದ್ದೇವೆ. ಲೋಕಸಭೆ ಚುನಾವಣೆಯಲ್ಲಿ ಆನಂದಸ್ವಾಮಿ ಗಡ್ಡದೇವರಮಠ ಅವರನ್ನು ಬೆಂಬಲಿಸಬೇಕು ಎಂದು ಡಿಸಿಎಂ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ ವಿನಂತಿಸಿದರು.

ಶನಿವಾರ ನಗರದ ಮುನ್ಸಿಪಲ್ ಕಾಲೇಜ್ ಮೈದಾನದಲ್ಲಿ ಹಾವೇರಿ–ಗದಗ ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರ ಪ್ರಚಾರ ಹಾಗೂ ಪ್ರಜಾಧ್ವನಿ ಯಾತ್ರೆ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದರು.



ಕಾಂಗ್ರೆಸ್ ಉಳುವವನೇ ಭೂಮಿಯ ಒಡೆಯ ಕಾಯ್ದೆ ಜಾರಿ ಮಾಡಿತು. ರೈತರ ಸಾಲ ಮನ್ನಾ ಮಾಡಿತು. ರೈತರಿಗೆ ಉಚಿತ ವಿದ್ಯುತ್ ನೀಡಿತು. ನೀರಾವರಿಗೆ ಅಣೆಕಟ್ಟೆಗಳನ್ನು ಕಟ್ಟಿತು. ಆದರೆ 10 ವರ್ಷದಲ್ಲಿ ರಾಜ್ಯದಲ್ಲಾಗಲೀ, ಕೇಂದ್ರದಲ್ಲಾಗಲೀ ಬಿಜೆಪಿ ಏನು ಸಾಧನೆ ಮಾಡಿದೆ ಎಂದು ಬೊಮ್ಮಾಯಿ ಅವರನ್ನು ಪ್ರಶ್ನಿಸಿ ಎಂದು ಡಿ.ಕೆ. ಶಿವಕುಮಾರ ಹೇಳಿದರು.

ಕಾಂಗ್ರೆಸ್ ಉಸ್ತುವಾರಿ ಸುರ್ಜೆವಾಲಾ ಮಾತನಾಡಿ, ರಾಜ್ಯ ಕಾಂಗ್ರೆಸ್ ಸರಕಾರ ನುಡಿದಂತೆ ನಡೆದಿದೆ. ಕೇಂದ್ರದಲ್ಲಿಯೂ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಎಲ್ಲ ಗ್ಯಾರಂಟಿಗಳನ್ನು ಈಡೇರಿಸಲಾಗುವುದು. ಬಿಜೆಪಿ ಉಳ್ಳವರ ಸಾಲ ಮನ್ನಾ ಮಾಡಿದರೆ, ಕಾಂಗ್ರೆಸ್ ರೈತರ ಸಾಲ ಮನ್ನಾ ಮಾಡಿ ಈ ದೇಶದ ರೈತರ ಹಿತವನ್ನು ಕಾಪಾಡುವ ಕೆಲಸ ಮಾಡಿದೆ ಎಂದರು.

ಸಮಾರಂಭದಲ್ಲಿ ಚಿತ್ರನಟ ಸಾಧು ಕೋಕಿಲಾ, ವಿ.ಪ ಸದಸ್ಯ ಸಲೀಂ ಅಹ್ಮದ್, ಶಾಸಕ ಶ್ರೀನಿವಾಸ ಮಾನೆ, ರೋಣ ಶಾಸಕ ಹಾಗೂ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಜಿ.ಎಸ್. ಪಾಟೀಲ, ಶಾಸಕ ವಿನಯ ಕುಲಕರ್ಣಿ, ಪಾಂಡಿಚೇರಿ ಮಾಜಿ ಸಿಎಂ ನಾರಾಯಣಸ್ವಾಮಿ, ಎಐಸಿಸಿ ವೀಕ್ಷಕ ಮಯೂರ ಕುಮಾರ ಬಿ., ನಿಕೇತರಾಜ್ ಮೌರ್ಯ, ಹಾವೇರಿ–ಗದಗ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಜಿ.ಎಸ್. ಗಡ್ಡದೇವರಮಠ, ಮುಖಂಡರಾದ ಸಿದ್ದು ಪಾಟೀಲ, ವಾಸಣ್ಣ ಕುರುಡಗಿ, ಟಿ. ಈಶ್ವರ, ಐ.ಜಿ. ಸನದಿ, ಎ.ಎಂ. ಹಿಂಡಸಗೇರಿ, ಎಲ್.ಡಿ. ಚಂದಾವರಿ, ನೀಲಮ್ಮ ಬೋಳನವರ, ಅಕ್ಬರಸಾಬ ಬಬರ್ಚಿ, ರಾಜುಗೌಡ ಕೆಂಚನಗೌಡ್ರ, ಬಸವರಾಜ ಕಡೆಮನಿ, ವಿ.ಆರ್. ಗುಡಿಸಾಗರ, ವಿ.ಬಿ. ಸೋಮನಕಟ್ಟಿಮಠ, ಅಶೋಕ ಮಂದಾಲಿ, ಬಸವರಾಜ ಸುಂಕಾಪುರ ಇತರರು ಉಪಸ್ಥಿತರಿದ್ದರು.

ಕಾನೂನು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್. ಕೆ. ಪಾಟೀಲ ಮಾತನಾಡಿ, ಗ್ಯಾರಂಟಿ ಕಾರ್ಯಕ್ರಮಗಳ ಮೂಲಕ ಕಾಂಗ್ರೆಸ್ ಕ್ರಾಂತಿಕಾರಕ ಬದಲಾವಣೆ ತಂದಿದೆ. ರಾಜ್ಯದ 1.10 ಕೋಟಿ ಕುಟುಂಬಗಳನ್ನು ಬಡತನ ರೇಖೆಯಿಂದ ಮೇಲೆತ್ತಿ ಮಧ್ಯಮ ವರ್ಗದವರನ್ನಾಗಿ ಮಾಡಿದ ಕೀರ್ತಿ ಕಾಂಗ್ರೆಸ್ ಸರಕಾರಕ್ಕೆ ಸಲ್ಲುತ್ತದೆ. ಈ ಹಿನ್ನೆಲೆಯಲ್ಲಿ ದೇಶದ ಭವಿಷ್ಯ ನಿರ್ಧರಿಸುವ ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ಎಂದರು.

### ಪ್ರಿಯಾಂಕಾ ಗಾಂಧಿ ಅನುಪಸ್ಥಿತಿ

ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ದಾವಣಗೆರೆಯಿಂದ ಗದುಗಿಗೆ ಆಗಮಿಸಿದರೂ, ಆದರೆ ರಾಯಬರೇಲಿಗೆ ತುರ್ತಾಗಿ ತೆರಳಬೇಕಿದ್ದರಿಂದ ಹುಬ್ಬಳ್ಳಿ ಮೂಲಕ ನವದೆಹಲಿಗೆ ನಿರ್ಗಮಿಸಿದರು. ಮಧ್ಯಾಹ್ನ 3 ಗಂಟೆಯಿಂದಲೇ ಪ್ರಿಯಾಂಕಾ ಗಾಂಧಿ ಅವರ ಮಾತುಗಳನ್ನು ಕೇಳಲು ಆಗಮಿಸಿದ್ದ ಸಾವಿರಾರು ಕಾರ್ಯಕರ್ತರು, ಅಭಿಮಾನಿಗಳು ನಿರಾಸೆಗೊಂಡರು. ಆದರೆ ಡಿ.ಕೆ. ಶಿವಕುಮಾರ ಭಾಷಣದ ವೇಳೆ ದೂರವಾಣಿಯಲ್ಲಿ ಸಭಿಕರನ್ನು ಉದ್ದೇಶಿಸಿ ಮಾತನಾಡಿದ ಪ್ರಿಯಾಂಕಾ ಗಾಂಧಿ, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ಕೊಟ್ಟು ಬದಲಾವಣೆಯನ್ನು ತಂದಿದ್ದೀರಿ. ಆ ಬದಲಾವಣೆಯನ್ನು ಕೇಂದ್ರದಲ್ಲಿಯೂ ತರಬೇಕು ಎಂದು ವಿನಂತಿಸಿದರು.

## ಸಂಪಾದಕೀಯ

# ವಾಕ್ ಸ್ವಾತಂತ್ರ್ಯದ ಹೆಸರಿನಲ್ಲಿ ಸಂವಿಧಾನದ ದುರುಪಯೋಗ

ಲೋಕಸಭೆ ಚುನಾವಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಹೆಸರನ್ನ ಹೊರತುಪಡಿಸಿ ಅತಿ ಹೆಚ್ಚು ಬಳಕೆಯಾಗಿದ್ದು ಸಂವಿಧಾನ ಶಿಲ್ಪಿ ಡಾ. ಬಿ ಆರ್ ಅಂಬೇಡ್ಕರ್ ಅವರ ಹೆಸರು. ಅದರಲ್ಲೂ ಸಂವಿಧಾನ ಬದಲಿಸುತ್ತೇವೆ ಎನ್ನುವ ಬಿಜೆಪಿ ನಾಯಕರ ಹೇಳಿಕೆಯ ನಂತರ, ದೇಶದ ಪ್ರತಿಯೊಬ್ಬ ಬಿಜೆಪಿ ನಾಯಕರ ಬಾಯಲ್ಲೂ ಅಂಬೇಡ್ಕರ್ ಅವರ ಹೆಸರು ಕೇಳಿ ಬರುತ್ತಿದೆ.

ಸಂವಿಧಾನ ಬದಲಾವಣೆ ಮಾಡುವುದಿಲ್ಲ ಎನ್ನುತ್ತಲೆ, ಒಂದು ವರ್ಗಕ್ಕೆ ನೀಡಿರುವ ಮೀಸಲಾತಿಯನ್ನು ಸಂವಿಧಾನ ಬದ್ಧವಾಗಿಯೇ ತೆಗೆದುಹಾಕುತ್ತೇವೆ ಎನ್ನುವಂತಹ ಮಾತುಗಳನ್ನ ಆಡುತ್ತಿದ್ದಾರೆ. ಮೀಸಲಾತಿ ರದ್ದು ಮಾಡುವುದು ಸಹ ಸಂವಿಧಾನ ಬದಲಾವಣೆ ಮಾಡಿದಷ್ಟೇ ಅಪಾಯಕಾರಿ ಕೆಲಸ.

ಇನ್ನು ಸಂವಿಧಾನ ಎಲ್ಲರಿಗೂ ಮಾತನಾಡುವ ಸ್ವಾತಂತ್ರ್ಯವನ್ನು ಕೊಟ್ಟಿದೆ. ದೇಶದ ಪ್ರತಿಯೊಬ್ಬ ಪ್ರಜೆಗೂ ತನ್ನದೇ ಆದ ಹಕ್ಕು ಮತ್ತು ಕರ್ತವ್ಯಗಳನ್ನ ಅಂಬೇಡ್ಕರ್ ಅವರು ನೀಡಿದ್ದಾರೆ. ಅಂಬೇಡ್ಕರ್ ಅವರ ಆಶಯಗಳು ಉತ್ತಮವಾಗಿವೆ. ಆದರೆ ಅದನ್ನ ಕೆಲವರು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ.

ಉದಾಹರಣೆ ತೆಗೆದುಕೊಳ್ಳುವುದಾದರೆ, ಒಂದು ಚಾಕುವಿನಿಂದ ತರಕಾರಿ ಹಣ್ಣುಗಳನ್ನ ಹೆಚ್ಚಲು ಬಳಸಿಕೊಳ್ಳಬಹುದು. ಅದೇ ಚಾಕುವಿನಿಂದ ವ್ಯಕ್ತಿ ಒಬ್ಬನನ್ನ ಕೊಲೆಯೂ ಮಾಡಬಹುದು. ಸದ್ಯ ಕೆಲವರು ಸಂವಿಧಾನವನ್ನ ಹಿಡಿದು ಕೊಲೆ ಮಾಡುವ ಕೆಲಸಕ್ಕೆ ಮುಂದಾಗುತ್ತಿದ್ದಾರೆ.

ವಾಕ್ ಸ್ವಾತಂತ್ರ್ಯದ ಹೆಸರಿನಲ್ಲಿ ದ್ವೇಷ ಭಾಷಣ ಮಾಡುತ್ತಿದ್ದಾರೆ. ಜಾತಿ ಧರ್ಮಗಳ ಮಧ್ಯೆ ವಿಷ ಬೀಜ ಬಿತ್ತುವ ಕೆಲಸವನ್ನ ನಿರಂತರವಾಗಿ, ನಿರಾತಂಕವಾಗಿ ಮಾಡುತ್ತಲೇ ಇದ್ದಾರೆ. ಹೀಗೆ ದ್ವೇಷ ಭಾಷಣ ಮಾಡಿದವರ ವಿರುದ್ಧ ದೂರು ದಾಖಲಿಸಿ ಕೊಂಡು ಶಿಕ್ಷೆ ನೀಡಲು ಅವಕಾಶವಿದೆ. ಆದರೆ ಇವರಿಗೆ ದ್ವೇಷ ಭಾಷಣ ಮಾಡಿದ ಆರೋಪದಲ್ಲಿ ಯಾರೊಬ್ಬರಿಗೂ ಶಿಕ್ಷೆಯಾಗಿಲ್ಲ.

ಈ ಕಾರಣದಿಂದಾಗಿ ಇವತ್ತು ಕರ್ನಾಟಕ ಸೇರಿದಂತೆ ದೇಶಾದ್ಯಂತ ಹಲವಾರು ಮುಖಂಡರು ದ್ವೇಷ ಭಾಷಣವನ್ನೇ ಬಂಡವಾಳ ಮಾಡಿಕೊಂಡಿದ್ದಾರೆ. ಸಂವಿಧಾನದಲ್ಲಿ ಇಂತವರಿಗೆ ಶಿಕ್ಷೆ ನೀಡಲು ಅವಕಾಶವಿದ್ದರೂ, ಅದು ಕಾರ್ಯಗತವಾಗದ ಕಾರಣ ಇಂಥವರ ಉಪಟಳ ಹೆಚ್ಚಾಗುತ್ತಲೇ ಇದೆ. ಈ ಉಪಟಳವನ್ನ ತಡೆಯುವುದಕ್ಕೆ ಮೊದಲು ಸಂವಿಧಾನದಲ್ಲಿ ಬದಲಾವಣೆ ಆಗಬೇಕಿದೆ. ಇಲ್ಲದಿದ್ದರೆ ದ್ವೇಷ ಭಾಷಣಗಳಿಗೆ ಕಡಿವಾಣ ಬೀಳುವುದೇ ಇಲ್ಲ.

### ಇಂದು ಕನ್ನಡಿಗರ ಸದಭಿಮಾನದ 'ಕನ್ನಡ ಸಾಹಿತ್ಯ ಪರಿಷತ್'ನ ಸಂಸ್ಥಾಪನಾ ದಿನಾಚರಣೆ

# ಕನ್ನಡಿಗರ 110 ವರ್ಷಗಳ ಧೀಮಂತಿಕೆ

'ಕನ್ನಡ ಎನೆ ಕುಣಿದಾಡುವುದೆನ್ನೆದೆ ಕನ್ನಡ ಎನೆ ಕಿವಿ ನಿಮಿರುವುದು' ಎಂದು ರಾಷ್ಟ್ರಕವಿ ಕುವೆಂಪು ಹಾಡಿದರೆ, 'ಕನ್ನಡವೆಂದರೆ ಬರಿ ನುಡಿಯಲ್ಲ, ಹಿರಿದಿದೆ ಅದರರ್ಥ; ಜಲವೆಂದರೆ ಕೇವಲ ನೀರಲ್ಲ, ಅದು ಪಾವನ ತೀರ್ಥ' ಎಂದು ನಿತ್ಯೋತ್ಸವ ಕವಿ ನಿಸಾರ್ ಅಹ್ಮದ್ ಬರೆದರು. ಇನ್ನು ಆಚಾರ್ಯ ವಿನೋಭಾ ಭಾವೆಯವರಂತೂ 'ವಿಶ್ವದ ಲಿಪಿಗಳ ರಾಣಿ ಅದು ಕನ್ನಡ' ಎಂದು ಅಂತರಂಗದ ನುಡಿಹಾರವನ್ನು ಕನ್ನಡ ಮಾತೆಗೆ ಅರ್ಪಿಸಿದರು.

ಇಂತಹ ಶ್ರೇಷ್ಠ, ಶ್ರೀಮಂತ ಪರಂಪರೆಯ ಕನ್ನಡ ಭಾಷೆ, ಕನ್ನಡ ಸಾಂಸ್ಕೃತಿಕತೆ, ಕನ್ನಡತನದ ಅಸ್ಮಿತೆಯಾಗಿ ಬೆಳೆದು ನಿಂತ ಕನ್ನಡ ಸಾಹಿತ್ಯ ಪರಿಷತ್ತಿಗೆ ಈಗ 110 ವರ್ಷಗಳ ಧೀಮಂತಿಕೆ. ಇಂದು ಈ ಕನ್ನಡಿಗರ ಸದಭಿಮಾನದ ಸಂಸ್ಥೆಯ ಸಂಸ್ಥಾಪನಾ ದಿನಾಚರಣೆ.

ಅದು 1909ರ ಸಮಯ. ಆಗ ಮುಂಬಯಿ ಸರ್ಕಾರದ ಸೇವೆಯಲ್ಲಿದ್ದ ಸರ್ ಎಂ.ವಿಶ್ವೇಶ್ವರಯ್ಯ ಅಲ್ಲಿಂದ ಬಿಡುಗಡೆ ಹೊಂದಿ, ಹೈದರಾಬಾದ್ ಸಂಸ್ಥಾನದ ಆಮಂತ್ರಣವನ್ನು ಸ್ವೀಕರಿಸದೆ ಮೈಸೂರು ಸರ್ಕಾರದ ಚೀಫ್ ಇಂಜಿನಿಯರ್‌ರಾಗಿ ನಿಯುಕ್ತಿಗೊಳ್ಳುತ್ತಾರೆ. ನಿಯುಕ್ತರಾದ ಪ್ರಾರಂಭದ ದಿನಗಳಲ್ಲಿಯೇ ಮೈಸೂರಿನ ಅಭಿವೃದ್ಧಿಯ ದೃಷ್ಟಿಯಿಂದ ಇಕನಾಮಿಕ್ ಕಾನ್‌ಫರೆನ್ಸ್ (ಸಂಪದಭ್ಯುದಯ ಸಭಾ) ಎಂಬ ಸಂಪದಭಿವೃದ್ಧಿ ಸಂಸ್ಥೆಯನ್ನು ಸ್ಥಾಪಿಸುವಂತೆ ಮಹಾರಾಜರಿಗೆ ಸಲಹೆ ನೀಡಿದರು. ಅವರ ಸಲಹೆಯಂತೆ ಕಾರ್ಖಾನೆ ಕೈಗಾರಿಕೆಗಳ ಸಮಿತಿ, ವಿದ್ಯಾಸಮಿತಿ, ಭೂವ್ಯವಸಾಯ ಸಮಿತಿ ಎಂಬ ಮೂರು ಸಮಿತಿಗಳು ರಚನೆಯಾದವು. ಇದರಲ್ಲಿ ವಿದ್ಯಾಸಮಿತಿಯಲ್ಲಿ ಪರ್ಯಾಲೋಚನೆಗೆ ಬಂದ ಎರಡು ಯೋಜನೆಗಳು– ಮೈಸೂರು ವಿಶ್ವವಿದ್ಯಾಲಯ ಮತ್ತು ಕರ್ನಾಟಕ ಸಾಹಿತ್ಯ ಪರಿಷತ್ತು.

ಪರಿಷತ್ತಿನ ಸ್ಥಾಪನೆ: 1914ರಲ್ಲಿ ಈ ಕುರಿತು ವಿಶೇಷ ಆಸಕ್ತಿ ವಹಿಸಿದ ಅದಾಗಲೇ ಮೈಸೂರಿನ ದಿವಾನರಾಗಿ ನಿಯುಕ್ತರಾಗಿದ್ದ ಸರ್ ಎಂ.ವಿಶ್ವೇಶ್ವರಯ್ಯನವರು ಈ ನಿರ್ಣಯದ ಸಾಕಾರಕ್ಕಾಗಿ ಚಾಲಕ ಸಮಿತಿಯನ್ನು ರಚಿಸಿದರು. ಈ ಸಮಿತಿಯು ನಾಡಿನೆಲ್ಲೆಡೆಯ ವಿದ್ವಾಂಸರುಗಳ ಸಲಹೆ–ಸಹಕಾರ ಪಡೆದು ಬೆಂಗಳೂರಿನಲ್ಲಿ ಸಮ್ಮೇಳನವೊಂದನ್ನು ಏರ್ಪಡಿಸಿತು. ಬೆಂಗಳೂರಿನ ಸರ್ಕಾರಿ ಪ್ರೌಢಶಾಲೆಯ ಪರಿಸರದಲ್ಲಿ 1915ರ ಮೇ 3ರಿಂದ ನಾಲ್ಕು ದಿನಗಳ ಕಾಲ ಇದು ಜರುಗಿತು. ಈ ಸಮ್ಮೇಳನದಲ್ಲಿ ಕನ್ನಡ ನಾಡು–ನುಡಿ–ಸಂಸ್ಕೃತಿಯ ರಕ್ಷಣೆ–ಸಂವರ್ಧನೆಗಾಗಿ ಕನ್ನಡ ಮಾತನಾಡುವ ಎಲ್ಲ ಭೂಪ್ರದೇಶಗಳ ಪ್ರತಿನಿಧಿಯಾಗಿ 'ಕರ್ನಾಟಕ ಸಾಹಿತ್ಯ ಪರಿಷತ್'ನ್ನು ಆ ಸಮ್ಮೇಳನದ ಸಂಧರ್ಭದಲ್ಲಿಯೇ ಪ್ರಾರಂಭಿಸಲಾಯಿತು.

ಸಮ್ಮೇಳನದ ಎರಡನೇ ದಿನದಲ್ಲಿ ಕೈಗೊಂಡ ನಿರ್ಣಯದಂತೆ ಮರುದಿನ (ಮೇ 5ರಂದು) 31 ಕಲಮುಗಳು, 5 ನಿಬಂಧನೆಗಳನ್ನು ಒಳಗೊಂಡಿದ್ದ ಪರಿಷತ್‌ನ ಸಂವಿಧಾನವು ಮಂಡಿಸಲ್ಪಟ್ಟು ಸರ್ವಾನುಮತದಿಂದ ಅಂಗೀಕೃತಗೊಂಡಿತು. ಹೀಗೆ ವಿಧಿವತ್ತಾಗಿ 1915 ಮೇ 5ರಂದು ಒಟ್ಟು 113 ಮಂದಿ ಸದಸ್ಯರೊಡನೆ ಕರ್ನಾಟಕ ಸಾಹಿತ್ಯ ಪರಿಷತ್ತು (ಇಂದಿನ ಕನ್ನಡ ಸಾಹಿತ್ಯ ಪರಿಷತ್ತು) ಸ್ಥಾಪನೆಗೊಂಡಿತು.

ಚಾಮರಾಜಪೇಟೆಯ ನಾಲ್ಕನೇ ಮುಖ್ಯರಸ್ತೆಯ ನಾನಾರಾಯರ ಮನೆಯ ಕೊಠಡಿಯಲ್ಲಿ ಕಾರ್ಯಾರಂಭ ಮಾಡಿದ ಪರಿಷತ್ ತನ್ನ ಆರಂಭದ 18 ವರ್ಷಗಳ ಕಾಲ ಬಾಡಿಗೆ ಕಟ್ಟಡಗಳಲ್ಲಿಯೇ ಕಾರ್ಯನಿರ್ವಹಿಸಿತು. 1923ರ ಸುಮಾರಿಗೆ ಶಂಕರಪುರದ ವಾಜಪೇಯಂ ಸೂರಪ್ಪ ಅವರ ಮನೆಯನ್ನು ಮಾಸಿಕ 30 ರೂ.ಗೆ ಬಾಡಿಗೆಗೆ ಪಡೆದು ಪರಿಷತ್‌ನ ಕಾರ್ಯಚಟುವಟಿಕೆಗಳನ್ನು ಮುಂದುವರಿಸಲಾಯಿತು. ಆಗ ಪರಿಷತ್ತಿನ ನೇತೃತ್ವ ವಹಿಸಿದ್ದ ಕರ್ಪೂರ ಶ್ರೀನಿವಾಸರಾಯರಿಗೆ ಶಂಕರಪುರದ ಸಮೀಪದಲ್ಲಿಯೇ ನಿವೇಶನವೊಂದನ್ನು ಖರೀದಿಸಿ ಪರಿಷತ್ತಿಗೆ ಸ್ವಂತ ಕಟ್ಟಡ ನಿರ್ಮಿಸುವ ಯೋಚನೆ ಹೊಳೆಯಿತು. ಕಾರ್ಯಪ್ರವೃತ್ತರಾದ ರಾಯರು ಶಂಕರಮಠದ ರಸ್ತೆಯಲ್ಲಿದ್ದ ಸರ್ಕಾರಿ ಶಾಲೆಯೊಂದರ ಸ್ವಲ್ಪ ಭಾಗವನ್ನು ಪಡೆಯುವ ಯೋಜನೆಯನ್ನೂ ಸಿದ್ಧಪಡಿಸಿದರು. ಇದಕ್ಕಾಗಿ ಅಂದು ಮೈಸೂರು ಸರ್ಕಾರದ ದಿವಾನರಾಗಿದ್ದ ಮಿರ್ಜಾ ಇಸ್ಮಾಯಿಲ್ ಅವರ ಗುರುಗಳೂ ಪರಿಷತ್ತಿನ ಕಾರ್ಯದರ್ಶಿಗಳೂ ಆಗಿದ್ದ ಬೆಳ್ಳಾವೆ ವೆಂಕಟನಾರಣಪ್ಪನವರು ಈ ವಿಷಯವನ್ನು ಆಗ ಮೈಸೂರಿನ ದಿವಾನರಾಗಿದ್ದ ಮಿರ್ಜಾ ಇಸ್ಮಾಯಿಲ್ ರವರಲ್ಲಿ ಪ್ರಸ್ತಾವಿಸುವ ವ್ಯವಸ್ಥೆ ಮಾಡಿದರು. ಕೊನೆಗೆ ಶಾಲೆಯ ಒಂದು ಭಾಗವನ್ನು ಪರಿಷತ್ತಿಗೆ ನೀಡಬಹುದೆಂದು ಮೈಸೂರು ಸರ್ಕಾರದ ಅಧಿಕಾರಿಗಳು ಸಮ್ಮತಿಸಿದರು.

1931ರ ಏಪ್ರಿಲ್ 12ರಂದು ಶಂಕುಸ್ಥಾಪನೆಗೊಂಡ ಸ್ವಂತ ಕಟ್ಟಡವು 1933ರಲ್ಲಿ ಲೋಕಾರ್ಪಣೆಗೊಂಡಿತು. ಇದಕ್ಕೆ ಶ್ರೀಕೃಷ್ಣರಾಜ ಪರಿಷನ್ಮಂದಿರವೆಂದು ನಾಮಕರಣ ಮಾಡಲಾಯಿತು. 1938ರಲ್ಲಿ ಬಳ್ಳಾರಿಯಲ್ಲಿ ನಡೆದ 23ನೇ ಸಾಹಿತ್ಯ ಸಮ್ಮೇಳನದ ನಿರ್ಣಯದ ಮೇರೆಗೆ ಕನ್ನಡ ಸಾಹಿತ್ಯ ಪರಿಷತ್ತು ಎಂದು ಮಾರ್ಪಾಡುಗೊಂಡಿತು.

ಪರಿಷತ್ ಪ್ರಕಟಿಸುತ್ತಾ ಬಂದಿರುವ ಎರಡು ಪ್ರಮುಖ ಮುಖಪತ್ರಿಕೆಗಳೆಂದರೆ 'ಕನ್ನಡ ಸಾಹಿತ್ಯ ಪರಿಷತ್ಪತ್ರಿಕೆ' ಮತ್ತು 'ಕನ್ನಡ ನುಡಿ'. ಕನ್ನಡ ನಾಡು–ನುಡಿಗಳಿಗೆ ಸಂಬಂಧಿಸಿದ ಮುಖ್ಯ ಘಟನೆಗಳು, ನಿರ್ಣಯಗಳು, ಸಾಧನೆ ಮೊದಲಾದವುಗಳ ಅಧಿಕೃತ ಮಾಹಿತಿಯ ದಾಖಲೀಕರಣದ ದೃಷ್ಟಿಯಿಂದ ಅಮೂಲ್ಯವಾದವು ಮತ್ತು ಆಕರಮೂಲಗಳಾಗಿವೆ. ಪರಿಷತ್ತಿನ ಮುಖವಾಣಿಯನ್ನಾಗಿ ಹಾಗೂ ಕನ್ನಡ ಚಟುವಟಿಕೆಗಳಿಗೆ ಮೀಸಲಾದ ಪತ್ರಿಕೆಯಾಗಿ 1938ರ ಅಕ್ಟೋಬರ್ 4 ರಂದು 'ಕನ್ನಡ ನುಡಿ' ಎಂಬ ವಾರಪತ್ರಿಕೆಯನ್ನು ಪರಿಷತ್ ಪ್ರಾರಂಭಿಸಿತು.

ಕಸಾಪ ಸಾಹಿತ್ಯ ಸಮ್ಮೇಳನಗಳ ಮೂಲಕ ನಾಡಿನ ಜನರಲ್ಲಿ ಕನ್ನಡತನದ ಡಿಂಡಿಮವನ್ನು ಯಶಸ್ವಿಯಾಗಿ ಮೊಳಗಿಸುತ್ತಿದೆ. ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲಿ ಪರಿಷತ್ತಿನ ಜಿಲ್ಲಾ ಘಟಕಗಳು, ತಾಲ್ಲೂಕು ಘಟಕಗಳು, ಹೋಬಳಿ ಘಟಕಗಳು ಹಾಗೂ ಕೆಲವೆಡೆ ಗ್ರಾಮ ಘಟಕಗಳು ಅಧಿಕೃತವಾಗಿ ಅಸ್ತಿತ್ವದಲ್ಲಿವೆ. ಪರಿಷತ್ತಿನ ಚಟುವಟಿಕೆ ಹೊರರಾಜ್ಯದಲ್ಲಿಯೂ ಹರಡಿದ್ದು ಅಲ್ಲಿ ವ್ಯವಸ್ಥಿತವಾಗಿ ಕನ್ನಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅಧಿಕೃತ ಗಡಿನಾಡ ಘಟಕಗಳನ್ನು ರಚಿಸಲಾಗಿದೆ.

18 ವರ್ಷ ಮೇಲ್ಪಟ್ಟ, ಕನ್ನಡ ಓದು–ಬರಹ ಬಲ್ಲ ಯಾರೇ ಆದರೂ ಪರಿಷತ್ತಿನ ಸದಸ್ಯರಾಗಬಹುದು. ದೇಶ–ವಿದೇಶಗಳಲ್ಲೂ ಸದಸ್ಯರಿದ್ದಾರೆ. ಪರಿಷತ್ತು ಪ್ರಸಕ್ತದಲ್ಲಿ 3.25 ಲಕ್ಷ ಸದಸ್ಯರನ್ನು ಹೊಂದಿದ್ದು, ಒಂದು ಸಾಹಿತ್ಯಕ ಸಂಸ್ಥೆಯಾಗಿ ಇಷ್ಟೊಂದು ಬೃಹತ್ ಸದಸ್ಯ ಬಲವನ್ನು ಹೊಂದಿರುವ ಸಂಸ್ಥೆಗಳಲ್ಲಿ ಅನನ್ಯವೆನಿಸುವಂತಹ ಗೌರವವನ್ನು ತನ್ನದಾಗಿಸಿಕೊಂಡಿದೆ. ಕನ್ನಡ ಹಾಗೂ ಕನ್ನಡಿಗರ ಅನನ್ಯ ಅಸ್ಮಿತೆಯಾದ ಕನ್ನಡ ಸಾಹಿತ್ಯ ಪರಿಷತ್ತಿನ ಈ ಸಂಸ್ಥಾಪನಾ ದಿನದಂದು ಸ್ಮರಿಸೋಣ.

– ಈಶ್ವರ ಎಸ್.ಮೆಡ್ಲೇರಿ.
ಅಧ್ಯಕ್ಷರು
ತಾಲೂಕಾ
ಕಸಾಪ–
ಲಕ್ಷ್ಮೇಶ್ವರ.



# ಅಮಿತ್ ಶಾ ವಿರುದ್ಧ ಚುನಾವಣಾ ಆಯೋಗಕ್ಕೆ ದೂರು



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ವಿರುದ್ಧ ಚುನಾವಣಾ ಪ್ರಚಾರ ಸಭೆಯೊಂದರಲ್ಲಿ ಅವಹೇಳನಕಾರಿ ಮಾತನಾಡಿದ ದೇಶದ ಗೃಹ ಸಚಿವ ಅಮಿತ್ ಶಾ ವಿರುದ್ಧ ರಾಜ್ಯ ಮುಖ್ಯ ಚುನಾವಣಾ ಅಧಿಕಾರಿ ಮನೋಜ್ ಕುಮಾರ್ ಮೀನಾ ಅವರನ್ನು ಭೇಟಿ ಮಾಡಿ ದೂರು ನೀಡಲಾಯಿತು ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಇದರ ರಾಜ್ಯಾಧ್ಯಕ್ಷ ತಾಹೇರ್ ಹುಸೇನ್ ತಿಳಿಸಿದ್ದಾರೆ.

ಚುನಾವಣಾಧಿಕಾರಿಯನ್ನು ಭೇಟಿ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವೆಲ್ಫೇರ್ ಪಾರ್ಟಿಯು ದೇಶದಲ್ಲಿ ಇಸ್ಲಾಮಿಕ್ ಸ್ಟೇಟ್ ಮಾಡಲು ಪ್ರಯತ್ನಿಸುತ್ತಿದೆ ಎಂದು ಅಮಿತ್ ಶಾ ಸುಳ್ಳು ಆರೋಪ ಹೊರಿಸಿದ್ದರು. ಇದು ಪಕ್ಷದ ವರ್ಚಸ್ಸಿಗೆ ಧಕ್ಕೆ ತಂದಿದೆ. ವೆಲ್ಫೇರ್ ಪಾರ್ಟಿ ಚುನಾವಣಾ ಆಯೋಗದಲ್ಲಿ ಅಧಿಕೃತವಾಗಿ ನೋಂದಾಯಿತ ಪಕ್ಷವಾಗಿದ್ದು, ಕಳೆದ 13 ವರುಷಗಳಿಂದ ಸಂವಿಧಾನಿಕವಾಗಿ ಸೇವೆ ಸಲ್ಲಿಸುತ್ತಿದೆ.

ಕಳೆದ ಹತ್ತು ವರ್ಷಗಳ ಕಾಲ ಆಡಳಿತ ನಡೆಸಿ ಯಾವುದೇ ಸಾಧನೆ ಮಾಡದೆ ಸೋಲಿನ ಸುಳಿವು ಸಿಕ್ಕಿದಾಗ ಹತಾಶರಾದ ಶಾ ಇಂತಹ ಅಸಂಬದ್ಧ ಹೇಳಿಕೆ ನೀಡುತ್ತಿದ್ದಾರೆ ಎಂದರು. ಈ ಸಂದರ್ಭದಲ್ಲಿ ಪಕ್ಷದ ಉಪಾಧ್ಯಕ್ಷ ಹಬಿಬುಲ್ಲಾಹ ಖಾನ್, ಪ್ರಧಾನ ಕಾರ್ಯದರ್ಶಿ ರಿಯಾಝ್, ಮುಖಂಡರಾದ ಪ್ರಭಾಕರ್ ಇದ್ದರು.

### ಗುತ್ತಲದಲ್ಲಿ ರೋಡ್ ಶೋ ನಡೆಸಿದ ಬಸವರಾಜ ಬೊಮ್ಮಾಯಿ

# ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿ ಮಾಡಿ ರಾಮರಾಜ್ಯ ಮಾಡೋಣ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಮಾತು ಕೊಟ್ಟಂತೆ ರಾಮಮಂದಿರ ನಿರ್ಮಾಣ ಮಾಡಿದ್ದು, ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿ ಮಾಡಿ, ರಾಮರಾಜ್ಯ ನಿರ್ಮಾಣ ಮಾಡೋಣ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ–ಗದಗ ಲೋಕಸಭೆ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಜಿಲ್ಲೆಯ ಗುತ್ತಲ ಪಟ್ಟಣದಲ್ಲಿ ರೋಡ್ ಶೋ ನಡೆಸಿ ಮಾತನಾಡಿದರು.



ತುಂಗಾ ಮೇಲ್ದಂಡೆ ಯೋಜನೆ ಮೂಲಕ ಹಾವೇರಿ ಜಿಲ್ಲೆಯ ಒಂದು ಲಕ್ಷ ಎಕರೆ ನೀರಾವರಿ ಮಾಡಿದ್ದೇವೆ. 900 ಕೋಟಿ ರೂ ಖರ್ಚು ಮಾಡಿ ಹಾವೇರಿಯ ಭೂ ತಾಯಿಯನ್ನು ಹಸಿರು ಸೀರೆ ಉಡುವಂತೆ ಮಾಡಿದ್ದೇವೆ.

ಈ ಜಿಲ್ಲೆ ಮಾಡಿದ್ದು ಜೆ ಎಚ್. ಪಟೇಲರು, ಸಿ.ಎಂ ಉದಾಸಿಯವರು, ಯಡಿಯೂರಪ್ಪ ಅವರು ಜಿಲ್ಲೆಯ ಅಭಿವೃದ್ಧಿ ಮಾಡಿದ್ದಾರೆ. ಈ ಜಿಲ್ಲೆಗೆ ಮೆಡಿಕಲ್ ಕಾಲೇಜು ಎಂಜನೀಯರಿಂಗ್ ಕಾಲೇಜು ನಾವು ತಂದಿದ್ದೇವೆ. ಹಾವೇರಿಗೆ ಹಾಲು ಒಕ್ಕೂಟ ತಂದು ಹೆಚ್ಚಿನ ದರ ಕೊಡುತ್ತಿದ್ದೇವೆ. ಗುತ್ತಲ ಪಟ್ಟಣ ಪಂಚಾಯತಿಯನ್ನು ನಗರ ಪ್ರದೇಶವನ್ನಾಗಿ ಮಾಡುತ್ತೇನೆ. ಒಂದೆಡೆ ನೀರಾವರಿ ಮತ್ತು ಕೈಗಾರಿಕೆ ಅಭಿವೃದ್ಧಿ ಪಡಿಸುತ್ತೇನೆ ಎಂದರು.

ಇದು ದೇಶದ ಚುನಾವಣೆ ಮೋದಿಯವರು ಸಮರ್ಥ ನಾಯಕರಿದ್ದಾರೆ. ಈ ದೇಶ ಸುಭದ್ರವಾಗಿರಬೇಕು ಎಂದರೆ ಮೋದಿಯವರು ಪ್ರಧಾನಿಯಾಗಬೇಕು. ನಮ್ಮ ಪ್ರಧಾನಿ ಅಭ್ಯರ್ಥಿ ಮೋದಿ ಎಂದು ಹೇಳುತ್ತಿದ್ದೇವೆ. ಆದರೆ, ಕಾಂಗ್ರೆಸ್ ನವರು ರಾಹುಲ್ ಗಾಂಧಿ ಹೆಸರು ಹೇಳಲು ಸಿದ್ದರಿಲ್ಲ. ರಾಹುಲ್ ಗಾಂಧಿ ನಮ್ಮ ಪಿತ್ರಾರ್ಜಿತ ಆಸ್ತಿ ಪಡೆಯಲು ಸರ್ಕಾರಕ್ಕೆ ಶೇ 55% ರಷ್ಟು ತೆರಿಗೆ ಕಟ್ಟಬೇಕಂತೆ ಹೇಳುತ್ತಿದ್ದಾರೆ. ಈ ರೀತಿಯ ಕಾನೂನು ತರುವವರನ್ನ ಬೆಂಬಲಿಸಬೇಕಾ ಎಂದು ಪ್ರಶ್ನಿಸಿದರು.

ರೋಡ್ ಶೋನಲ್ಲಿ ಮಾಜಿ ಶಾಸಕ ಶಿವರಾಜ ಸಜ್ಜನ ಹಾಜರಿದ್ದರು.

# ಪ್ರಜ್ಞಾವಂತ ಪ್ರಜೆಯೇ ದೇಶದ ಆಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮತದಾರ ತನ್ನ ಇತಿ–ಮಿತಿಗಳನ್ನು ಅರಿತು, ಯಾವುದೇ ಆಸೆ–ಆಮಿಷಕ್ಕೆ ಒಳಗಾಗದೇ, ಯೋಗ್ಯ ಅಭ್ಯರ್ಥಿಯನ್ನು ನಿರ್ಭೀತಿಯಿಂದ ಚುನಾವಣೆಯಲ್ಲಿ ಆರಿಸಿ ಕಳಿಸಿದಾಗ ಮಾತ್ರ ದೇಶದ ಪ್ರಗತಿ ಸಾಧ್ಯ ಎಂದು ಸನ್ಮಾರ್ಗ ಮಹಾವಿದ್ಯಾಲಯದ ಚೇರಮನ್ ರಾಜೇಶ ಕುಲಕರ್ಣಿ ಹೇಳಿದರು.

ಅವರು ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಮತದಾರರ ಮಹತ್ವದ ಕುರಿತ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪ್ರಗತಿ ಪರದೇಶಕ್ಕೆ ಪ್ರಜ್ಞಾವಂತ ಪ್ರಜೆಯೇ ಪ್ರಮುಖ ಆಸ್ತಿ. ಪ್ರತಿ 5 ವರ್ಷಕ್ಕೊಮ್ಮೆ ಬರುವ ಚುನಾವಣೆಯಲ್ಲಿ ಪ್ರಜ್ಞಾವಂತ ಮತದಾರರಾದ ನಾವು ನೀವೆಲ್ಲರೂ ನಮ್ಮ ನಮ್ಮ ಜವಾಬ್ದಾರಿ, ಕರ್ತವ್ಯಗಳನ್ನು ಅರಿತು ಯೋಗ್ಯ ವ್ಯಕ್ತಿಗೆ ಮತದಾನ ಮಾಡಿದಲ್ಲಿ ನಮ್ಮ ದೇಶ ಹೆಚ್ಚಿನ ಪ್ರಗತಿ ಸಾಧಿಸುವುದರಲ್ಲಿ ಸಂದೇಹವೇ ಇಲ್ಲ ಎಂದರು.

ಪ್ರೊ. ರಾಹುಲ್ ಒಡೆಯರ್ ಮತದಾರರ ಪ್ರತಿಜ್ಞಾ ವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಪ್ರಾಚಾರ್ಯರಾದ ಪ್ರೊ. ಉಡುಪಿ ದೇಶಪಾಂಡೆ, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ಪ್ರೊ. ಸೈಯದ್ ಮುಲ್ಲಾ, ಪ್ರೊ. ರೋಹಿತ್ ಒಡೆಯರ್, ಮಹಾವಿದ್ಯಾಲಯದ ಎಲ್ಲ ವಿದ್ಯಾರ್ಥಿಗಳು, ಉಪನ್ಯಾಸಕರು, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.






ಮುಂಡರಗಿ ತಾಲೂಕಾ ಸ್ವೀಪ್ ಸಮಿತಿ ವತಿಯಿಂದ ಕಡ್ಡಾಯ ಮತದಾನ ಜಾಗೃತಿಗಾಗಿ ಸಂಜೀವಿನಿ ಒಕ್ಕೂಟದ ಸಿಬ್ಬಂದಿ ಜಾಗೃತಿ ಜಾಥಾ ಪಟ್ಟಣದಲ್ಲಿ ನಡೆಯಿತು. ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ಜಾಥಾ ಕಡ್ಡಾಯ ಮತದಾನದ ಘೋಷಣೆಗಳನ್ನು ಕೂಗಿ ಜಾಥಾ ಸಂಚರಿಸಿದ ಮೇನ್ ಬಜಾರ್, ಜಾಗೃತ ಸರ್ಕಲ್ ಹಾಗೂ ಕೊಪ್ಪಳ ಕ್ರಾಸಿನಲ್ಲಿ ಜಾಗೃತಿ ಮೂಡಿಸಿತು. ಜಾಥಾದಲ್ಲಿ ತಾಪಂ ಸಿಬ್ಬಂದಿಗಳಾದ ಫಕ್ರುದ್ದೀನ್ ನದಾಫ್, ಜಗದೀಶ ಎ, ಎಚ್ ಎಂ ಕಾತರಕಿ, ಅಶೋಕ ಅಣ್ಣಿಗೇರಿ, ಮಹಾತೇಂಶ ಖೋತ, ಶರಣಪ್ಪ ಗಿರಣಿ, ಸಿದ್ದರಾಮಪ್ಪ ಇದ್ದರು.



ನರೇಗಲ್ಲ ಸಮೀಪದ ಕುರಡಗಿಯಲ್ಲಿ ಅಂಜುಮನ್ ಇಸ್ಲಾಂ ಕಮೀಟಿಯ ಚೇರ್ಮನ್ ಶೌಕತ್‌ಅಲಿ ನರೇಗಲ್ಲ, ಮಾಜಿ ಚೇರರ್ಮನ್ ಹುಚ್ಚುಸಾಬ ಗೋಗೇರಿ, ವಕೀಲರಾದ ಶೌಕತ್‌ಅಲಿ ನದಾಫ್ ನೇತೃತ್ವದಲ್ಲಿ ಲೋಕಸಭೆ ಚುನಾವಣೆಯ ಕಾಂಗ್ರೆಸ್ ಗ್ಯಾರಂಟಿ ಕಾರ್ಡ್‌ಗಳನ್ನು ವಿತರಿಸಿದರು.
ಮಹಮ್ಮದ್‌ರಫಿಕ್ ನದಾಫ್, ಹುಸೇನ್ ಕೋತಬಾಳ, ದಾವಲ್ ನದಾಫ್, ಉಮರ್ ನದಾಫ್, ಅಶ್ಫಾಕ್ ನದಾಫ್, ಶರಣಪ್ಪ ಕುರಿ, ಮುದಿಯಪ್ಪ ಮಡಿವಾಳರ, ಶಿವಪ್ಪ ದೇವರಮನಿ ಸೇರಿದಂತೆ ಸಮಾಜದ ಮುಖಂಡರು ಹಾಜರಿದ್ದರು.

# ಅಪಹರಣ ಪ್ರಕರಣ: ಶಾಸಕ ಹೆಚ್.ಡಿ.ರೇವಣ್ಣ ಬಂಧನ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಅಪಹರಣ ಪ್ರಕರಣದಲ್ಲಿ ಹೊಳೆನರಸೀಪುರ ಜೆಡಿಎಸ್ ಶಾಸಕ ಹೆಚ್.ಡಿ ರೇವಣ್ಣಗೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಮಧ್ಯಂತರ ನಿರೀಕ್ಷಣಾ ಜಾಮೀನು ವಜಾಗೊಳಿಸಿದ್ದು ನಿರೀಕ್ಷಣಾ ಜಾಮೀನು ಅರ್ಜಿ ವಿಚಾರಣೆಯನ್ನು ಮೇ 6ಕ್ಕೆ ಮುಂದೂಡಿದೆ. ಮಧ್ಯಂತರ ನಿರೀಕ್ಷಣಾ ಜಾಮೀನು ವಜಾಗೊಳ್ಳುತ್ತಿದ್ದಂತೆ ಹೆಚ್.ಡಿ ರೇವಣ್ಣಗೆ ಬಂಧನದ ಭೀತಿ ಶುರುವಾಗಿತ್ತು. ಜಾಮೀನು ಅರ್ಜಿ ವಜಾಗೊಂಡ ಬೆನ್ನಲ್ಲೇ ಪದ್ಮನಾಭನಗರದಲ್ಲಿರುವ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಅವರ ನಿವಾಸಕ್ಕೆ ಎಸ್‌ಐಟಿ ಅಧಿಕಾರಿಗಳು ಆಗಮಿಸಿದ್ದರು.

ದೇವೇಗೌಡರ ಮನೆಯಲ್ಲಿ ರೇವಣ್ಣ ಅವರು ಇರಬಹುದು ಎಂದು ಶಂಕಿಸಿರುವ ಅಧಿಕಾರಿಗಳು ಮನೆಯ ಮುಂಬಾಗಿಲು ಹಾಗೂ ಹಿಂಬಾಗಿಲಿನಲ್ಲಿ ನಿಂತುಕೊಂಡಿದ್ದರು.

# ಮತದಾನ ಹೆಚ್ಚಳಕ್ಕೆ ವಿಶಿಷ್ಠ ಪ್ರಯತ್ನ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ


ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಮುಂಡರಗಿ ತಾಲೂಕಾ ಸ್ವೀಪ್ ಸಮಿತಿ ತಾಲೂಕಿನಾದ್ಯಂತ ಮತದಾನ ಪ್ರಮಾಣದ ಹೆಚ್ಚಳದ ಗುರಿ ಹೊಂದಿದ್ದು, ಮತದಾರರನ್ನು ಹೆಚ್ಚು ಸೆಳೆಯುವ ದೃಷ್ಟಿಯಿಂದ ಡಂಬಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಬಾಲಕಿಯರ ಶಾಲೆಯ ಮತಗಟ್ಟೆ ಸಂಖ್ಯೆ 232, 233ರಲ್ಲಿ ವಿಭಿನ್ನ ಕಲಾಕೃತಿಗಳನ್ನು ಚಿತ್ರಿಸಿ ಅಲಂಕರಿಸಲಾಗಿದೆ.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಡಂಬಳ ಗ್ರಾಮದಲ್ಲಿ ಮತದಾನದ ಪ್ರಮಾಣ ಕಡಿಮೆಯಾಗಿತ್ತು. ಅದಕ್ಕಾಗಿ ಕಲಾಕೃತಿಗಳನ್ನು ಬಿಡಿಸುವ ಮೂಲಕ ಮತದಾನ ಪ್ರಮಾಣದ ಹೆಚ್ಚಳಕ್ಕೆ ಶ್ರಮಿಸಲಾಗುತ್ತಿದೆ. 'ನನ್ನ ಮತ ನನ್ನ ಆಯ್ಕೆ, ನಿಮ್ಮ ಮತ ನಿಮ್ಮ ಧ್ವನಿ' ಎಂಬ ಘೋಷಣೆಗಳನ್ನು ಬರೆಯಿಸುವ ಮೂಲಕ ಜಿಲ್ಲಾ ಹಾಗೂ ತಾಲೂಕಾ ಸ್ವೀಪ್ ಸಮಿತಿಗಳು ಜಾಗೃತಿ ಮೂಡಿಸುತ್ತಿವೆ.



ಭಾರತದಂತಹ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಮುಕ್ತ ಮತ್ತು ನ್ಯಾಯಸಮ್ಮತ ಮತದಾನ ಸಂಘಟಿಸುವುದು ದೊಡ್ಡ ಕೆಲಸವಾಗಿದೆ. ಮತದಾರರ ಜಾಗೃತಿಗಾಗಿ ಚುನಾವಣಾ ಆಯೋಗ ಹಲವು ಜಾಗೃತಿ ಕಾರ್ಯಗಳನ್ನು ಕೈಗೊಳ್ಳುತ್ತಿದೆ. ಈ ದಿಸೆಯಲ್ಲಿ ಜಿಲ್ಲಾ ಹಾಗೂ ತಾಲೂಕಾ ಸ್ವೀಪ್ ಸಮಿತಿ ವಿಶಿಷ್ಟ ಯೋಚನೆ ಮೂಲಕ ಕಲೆಯನ್ನು ಬಳಸಿಕೊಂಡಿರುವುದು ವಿಶೇಷವಾಗಿದೆ.

ಮತದಾರರನ್ನು ಸೆಳೆಯಲು ಈಗಾಗಲೇ ಕಾಲ್ನಡಿಗೆ ಜಾಥಾ, ಮತದಾನ ಕಡಿಮೆಯಾದ ಪಟ್ಟಣದ ಪ್ರದೇಶಗಳಲ್ಲಿ ಮನೆ ಮನೆ ಭೇಟಿ, ಬೈಕ್ ರ್‍ಯಾಲಿಗಳನ್ನು ಹಮ್ಮಿಕೊಳ್ಳಲಾಗಿದೆ. ಅದೇ ರೀತಿ ಡಂಬಳದ ಎರಡು ಮತಗಟ್ಟೆಗಳಲ್ಲಿ ಚಿತ್ರಕಲೆ ಮೂಲಕ ಜಾಗೃತಿ ಮೂಡಿಸುವ ಪ್ರಯತ್ನ ಇದಾಗಿದೆ ಎಂದು ಮುಂಡರಗಿ ತಾ.ಪಂ ಇಓ ವಿಶ್ವನಾಥ ಹೊಸಮನಿ ವಿವರಿಸಿದರು.



### ಶ್ರೀ ಜ. ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಕಾರ್ಯಕ್ರಮದಲ್ಲಿ ರಂಭಾಪುರಿ ಶ್ರೀಗಳು

# ಸತ್ಕ್ರಾಂತಿಗೆ ಮುನ್ನುಡಿ ಬರೆದವರು ರೇಣುಕಾಚಾರ್ಯರು

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಅಸ್ಪ್ರಶ್ಯತೆಯನ್ನು ನಿವಾರಿಸಿ ಸಮಾಜದಲ್ಲಿ ಸರ್ವರಿಗೂ ಸಮಾನ ಅವಕಾಶಗಳನ್ನು ನೀಡುವ ಮೂಲಕ ಸತ್ಕ್ರಾಂತಿಗೆ ಮುನ್ನುಡಿ ಬರೆದ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ನಗರದ ಆನಂದರಾವ್ ವೃತ್ತದಲ್ಲಿರುವ ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾಸಂಸ್ಥೆಯ ಸಭಾಂಗಣದಲ್ಲಿ ಆಯೋಜಿಸಿದ್ದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಮಾಜದಲ್ಲಿರುವ ಮೇಲು-ಕೀಳು ಎಂಬ ತಾರತಮ್ಯವನ್ನು ಹೋಗಲಾಡಿಸಿ ಭೂಮಿಯ ಮೇಲೆ ಹುಟ್ಟಿದ ಪ್ರತಿಯೊಬ್ಬರಿಗೂ ಭಗವಂತನನ್ನು ಅರ್ಚಿಸಲು ಸಮಾನ ಅವಕಾಶವಿದ್ದು, ಎಲ್ಲ ವರ್ಗದ ಜನರಿಗೆ ಸಂಸ್ಕಾರ ನೀಡುವುದಕ್ಕಾಗಿ 18 ಜಾತಿ ಜನಾಂಗಗಳಿಗೆ ಪ್ರತ್ಯೇಕವಾದ ಮಠಗಳನ್ನು ನಿರ್ಮಿಸುವ ಮೂಲಕ ಯುಗ ಯುಗಗಳ ಹಿಂದೆಯೇ ಧಾರ್ಮಿಕ ಸತ್ಕ್ರಾಂತಿಯನ್ನು ಮಾಡಿದ ಮಹಾಪುರುಷ ಶ್ರೀ ಜಗದ್ಗುರು ರೇಣುಕಾಚಾರ್ಯರು. ನೆರೆಯ ತೆಲಂಗಾಣ ರಾಜ್ಯದ ಕೊಲ್ಲಿಪಾಕಿ ಸ್ವಯಂಭು ಸೋಮೇಶ್ವರ ಶಿವಲಿಂಗದಿಂದ ಆವಿರ್ಭವಿಸಿದ ಶ್ರೀ ಜಗದ್ಗುರು ರೇಣುಕಾಚಾರ್ಯರು ಮಾಡಿದ ಸಾಮಾಜಿಕ ಕ್ರಾಂತಿಯ ಕುರುಹುಗಳನ್ನು ಇಂದಿಗೂ ಕಾಣಬಹುದು.




ಅಂದು ರೇಣುಕಾಚಾರ್ಯರು ಬೆಳಗಿದ ಧರ್ಮ ದೀವಿಗೆಯು ನಿರಂತರವಾಗಿ ಇಂದಿಗೂ ಸಮಾಜಕ್ಕೆ ಜ್ಞಾನದ ಬೆಳಕನ್ನು ನೀಡುತ್ತಿದೆ. ಮಕ್ಕಳಿಗೆ ಚಿಕ್ಕ ವಯಸ್ಸಿನಲ್ಲಿ ನೀಡುವ ಸಂಸ್ಕಾರ ಜೀವನ ಪರ್ಯಂತ ಸತ್ಫಲ ನೀಡುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳು ಅಂತಹ ಸಂಸ್ಕಾರ ಪಡೆಯುತ್ತಿದ್ದಾರೆ ಎಂದರು.

ನಾಡು ಕಂಡ ಶ್ರೇಷ್ಠ ವಿದ್ವಾಂಸ ಡಾ.ಜಚನಿಯವರು ಬರೆದಿರುವ ಸಿದ್ಧಾಂತ ಶಿಖಾಮಣಿ ಪಾರಾಯಣ ಗ್ರಂಥದ ಕನ್ನಡಾನುವಾದದ ಕೃತಿಯನ್ನು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಬಿಡುಗಡೆಗೊಳಿಸಿದರು. ಮರುಮುದ್ರಣವಾದ ಕೃತಿಯನ್ನು ಹಿರಿಯ ವಿದ್ವಾಂಸ ಡಾ. ಸಿ.ಶಿವಕುಮಾರಸ್ವಾಮಿ ಸಂಪಾದಿಸಿದ್ದು, 1380 ಶ್ಲೋಕಗಳಿಂದ ಕೂಡಿದೆ.

ಕಾರ್ಯಕ್ರಮದಲ್ಲಿ ತುಮಕೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಪ್ರಾಧ್ಯಾಪಕರಾದ ಡಾ.ಮೀನಾಕ್ಷಿ ಖಂಡಿಮಠ ಸಾಮಾಜಿಕ ನೆಲೆಗಟ್ಟಿನಲ್ಲಿ ರೇಣುಕಾಚಾರ್ಯರ ಕೊಡುಗೆಗಳ ಕುರಿತು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಅಕಾಡೆಮಿ ಡೀನ್ ಡಾ. ಎ.ಸಿ. ವಾಲಿಯವರು ಶ್ರೀ ಜಗದ್ಗುರು ರೇಣುಕರ ಕ್ರಾಂತಿಗಳ ಕುರಿತು ಉಪನ್ಯಾಸ ನೀಡಿದರು.

ಎಸ್‌ಜೆಆರ್ ವಿದ್ಯಾಸಂಸ್ಥೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಲಾಯಿತು. ಪಿಎಚ್‌ಡಿ ಪಡೆದ ಸಂಸ್ಥೆಯ ಉಪನ್ಯಾಸಕರಿಗೆ, ಉತ್ತಮವಾಗಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳಿಗೆ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯರ ಆದರ್ಶ ಮೌಲ್ಯಗಳ ಬಗ್ಗೆ ಜನರಿಗೆ ಹೆಚ್ಚು ಪರಿಚಯವಿಲ್ಲದಿರುವುದರಿಂದ ವ್ಯಾಪಕವಾಗಿ ಪ್ರಚಾರ ಮಾಡುವ ಅಗತ್ಯವಿದ್ದು, ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾಸಂಸ್ಥೆಯಲ್ಲಿ ಸಂಶೋಧನಾ ಕೇಂದ್ರವನ್ನು ಸ್ಥಾಪಿಸುವ ಚಿಂತನೆ ಇದೆ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ತಿಳಿಸಿದರು.

ಸಿದ್ದರಬೆಟ್ಟ ಕ್ಷೇತ್ರದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು, ವಿದ್ವಾಂಸರಾದ ಡಾ. ಸಿ.ಶಿವಕುಮಾರಸ್ವಾಮಿ, ಶ್ರೀ ರಂಭಾಪುರಿ ಪೀಠದ ಆಡಳಿತಾಧಿಕಾರಿ ಎಸ್.ಬಿ. ಹಿರೇಮಠ ಮತ್ತಿತರರು ಉಪಸ್ಥಿತರಿದ್ದರು. ಪ್ರೊ. ಆರ್. ರೇಖಾ ಪ್ರಾಸ್ತಾವಿಕ ಮಾತನಾಡಿದರು. ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾಸಂಸ್ಥೆಯ ಅಧ್ಯಕ್ಷ ಯು.ಎಂ. ಬಸವರಾಜ ಸ್ವಾಗತಿಸಿದರು.

---

### ಮಾಜಿ ಸಚಿವೆ, ಚಲನಚಿತ್ರ ನಟಿ ಉಮಾಶ್ರೀ ಅವರಿಂದ ಕಾಂಗ್ರೆಸ್ ಅಭ್ಯರ್ಥಿ ಪರ ಪ್ರಚಾರ

## ಗ್ಯಾರಂಟಿ ಯೋಜನೆಗಳು ನಿಲ್ಲುವದಿಲ್ಲ




■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಿದ್ದರಾಮಯ್ಯನವರ ಸರಕಾರ ಗ್ಯಾರಂಟಿ ಯೋಜನೆಗಳನ್ನು ನೀಡಿರುವದನ್ನು ಟೀಕಿಸಿದ್ದ ವಿಪಕ್ಷಗಳು ಇದೀಗ ಅವುಗಳ ಯಶಸ್ವಿ ಅನುಷ್ಠಾನದಿಂದ ಕಂಗಾಲಾಗಿವೆ. ಬಿಜೆಪಿ ಅಧಿಕಾರದಲ್ಲಿದ್ದಾಗ ಇಂತಹ ಯೋಜನೆ ಮಾಡುವದು ಆಗಲಿಲ್ಲ, ಆದರೆ ಗ್ಯಾರಂಟಿ ಯೋಜನೆಗಳ ಯಶಸ್ಸು ನೋಡಿ ಹತಾಶರಾಗಿದ್ದಾರೆ. ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳು ನಿಲ್ಲುವದಿಲ್ಲ ಎಂದು ಮಾಜಿ ಸಚಿವೆ, ಚಲನಚಿತ್ರ ನಟಿ ಉಮಾಶ್ರೀ ಸ್ಪಷ್ಟಪಡಿಸಿದರು.

ಅವರು ಲಕ್ಷ್ಮೇಶ್ವರ ಸಮೀಪದ ಶಿಗ್ಲಿ ಗ್ರಾಮದಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪರವಾಗಿ ದೇವಾಂಗ ಸಮಾಜ ಮತ್ತು ಸಾರ್ವಜನಿಕರ ಪ್ರಚಾರ ಸಭೆಯಲ್ಲಿ ಮಾತನಾಡುತ್ತಿದ್ದರು.

ಬಹುತೇಕ ಮನೆಗಳಲ್ಲಿ ಗ್ಯಾರಂಟಿ ಯೋಜನೆಗಳ ಲಾಭ ಪಡೆದವರಿದ್ದು, ಮನೆಯೊಡತಿಗೆ ರೂ.2000, 10 ಕೆಜಿ ಅಕ್ಕಿ, ಯುವನಿಧಿ, ಗೃಹಜ್ಯೋತಿ, ಶಕ್ತಿ ಯೋಜನೆ ಇತ್ಯಾದಿಗಳನ್ನು ಅನುಷ್ಠಾನಗೊಳಿಸಿರುವ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ ನೇತೃತ್ವದ ಜನರ ನೋವಿಗೆ ಸ್ಪಂದಿಸುವ ಸರಕಾರ ಇದ್ದು, ವಿರೋಧ ಪಕ್ಷಗಳ ಟೀಕೆಯಿಂದ ಮತದಾರರ ಮೇಲೆ ಪರಿಣಾಮ ಬೀರುವದಿಲ್ಲ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಮಾಜಿ ಶಾಸಕರುಗಳಾದ ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಜಿ.ಎಸ್. ಗಡ್ಡದೇವರಮಠ, ಗುರುನಾಥ ದಾನಪ್ಪನವರ, ರಾಮಣ್ಣ ಲಮಾಣಿ(ಶಿಗ್ಲಿ), ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ ಮಾತನಾಡಿದರು.

ಗ್ರಾ.ಪಂ ಅಧ್ಯಕ್ಷೆ ದುಂಡವ್ವ ಹಾದಿಮನಿ, ನೀಲವ್ವ ಬೋಳಮ್ಮನವರ, ಬಾಬಣ್ಣ ಪಟ್ಟಣದ, ಯಲ್ಲಪ್ಪ ತಳವಾರ, ರಾಜರತ್ನ ಹುಲಗೂರ, ರಫೀಕ ಕಲಬುರ್ಗಿ, ಸುಶೀಲವ್ವ ಲಮಾಣಿ, ರಾಜು ಮಡಿವಾಳರ, ರಾಜು ಓಲೇಕಾರ, ಪರಮೇಶ ಲಮಾಣಿ, ಪದ್ಮರಾಜ ಪಾಟೀಲ, ತಿಪ್ಪಣ್ಣ ಸಂಶಿ, ಜಂತ್ರವ್ವ ನಾಯಕ್, ಸಂತೋಷ ತಾಂದಳೆ, ಸುರೇಶ ಸ್ವಾದಿ, ಭರತ್ ಬಳಿಗಾರ ಸೇರಿದಂತೆ ನೂರಾರು ಕಾರ್ಯಕರ್ತರಿದ್ದರು.

ಸರಕಾರದಿಂದ ಪ್ರಯೋಜನ ಪಡೆದ ಪ್ರತಿಯೊಬ್ಬರೂ ಆನಂದಸ್ವಾಮಿಯವರಿಗೆ ಮತ ನೀಡುವ ಮೂಲಕ ಆನಂದದ ಗೆಲುವು ನೀಡುವ ವಿಶ್ವಾಸವನ್ನು ನಾವು ಕಾಣುತ್ತಿದ್ದೇವೆ. ಎಲ್ಲರೂ ಮತದಾನ ಮಾಡಿ ಆನಂದಸ್ವಾಮಿಯವರನ್ನು ಆಯ್ಕೆ ಮಾಡುವಂತೆ ಉಮಾಶ್ರೀ ಮನವಿ ಮಾಡಿದರು

---

## ರಾಜ್ಯದಲ್ಲಿ ಒಂದೇ ವರ್ಷದಲ್ಲಿ ರೈತಪರ ಸರ್ಕಾರ

▸▸ ಮೊದಲನೇ ಪುಟದಿಂದ


**ಅಭಿವೃದ್ಧಿ ಸ್ಥಗಿತ :** ರಾಜ್ಯದಲ್ಲಿ ಅಭಿವೃದ್ಧಿ ಸಂಪೂರ್ಣ ಸ್ಥಗಿತ ಆಗಿದೆ. ಆಡಳಿತ ಪಕ್ಷದ ಶಾಸಕರು ಸಿಎಂ ಹತ್ತಿರ ಹೋಗಿ ಅಭಿವೃದ್ಧಿಗೆ ಹಣ ನೀಡುವಂತೆ ಕೇಳಿದ್ದರಂತೆ ಅವರು ಅಭಿವೃದ್ಧಿಗೆ ಹಣ ಇಲ್ಲ. ನೀವೇನಾದರೂ ಮಾಡಿಕೊಳ್ಳುವುದಿದ್ದರೆ ವರ್ಗಾವಣೆಯಲ್ಲಿ ಮಾಡಿಕೊಳ್ಳಿ ಎಂದು ಹೇಳಿದರಂತೆ. ಹೀಗಾಗಿ ವರ್ಗಾವಣೆಯಲ್ಲಿ ಲಾಭ ಮಾಡಿಕೊಳ್ಳುತ್ತಿದ್ದಾರಂತೆ ಎಂದು ಆರೋಪಿಸಿದರು.

**ಸುಳ್ಳು ಗ್ಯಾರಂಟಿ :** ಕಾಂಗ್ರೆಸ್ ನವರು ಒಂದು ಲಕ್ಷ ಕೊಡುವುದಾಗಿ ಗ್ಯಾರಂಟಿ ಕಾರ್ಡ್ ಕೊಡುತ್ತಿದ್ದಾರೆ. ಅವರು ಸ್ಪರ್ಧೆ ಮಾಡಿರುವುದೇ 200 ಸ್ಥಾನಕ್ಕೆ ಅವರು ಬಹುಮತ ಬರುವುದಿಲ್ಲ ಅವರು ಹೇಳುವ ಸುಳ್ಳು ಗ್ಯಾರಂಟಿ ನಂಬಬೇಡಿ, ಪ್ರಧಾನಿ ಮೋದಿಯವರು ಮಹಿಳೆಯರಿಗೆ ಸ್ವಂತ ಉದ್ಯೋಗ ಮಾಡಲು ಲಾಕ್ ಪತಿ ದೀದಿ ಯೋಜನೆ ಮಾಡಿದ್ದಾರೆ. ಮಹಿಳೆಯರು ಸ್ವಂತ ಉದ್ಯೋಗ ಮಾಡಿ ಲಕ್ಷಾಧಿಪತಿ ಆಗಬಹುದು. ಈ ಯೋಜನೆಯನ್ನು ನಿಮಗೆ ತಲುಪಿಸುವ ಜವಾಬ್ದಾರಿ ನನ್ನದು ಎಂದು ಹೇಳಿದರು.

ಈಗ ಮೋದಿಯವರ ಋಣ ತೀರಿಸುವ ಸಮಯ ಬಂದಿದೆ. ಅವರಿಗೆ ಮತ ಹಾಕುವ ಮೂಲಕ ಮತ್ತೊಮ್ಮೆ ಪ್ರಧಾನಿ ಮಾಡಿ, ನೀವು ಕೊಡುವ ಮತವನ್ನು ಸ್ವಂತಕ್ಕೆ ಬಳಸಿಕೊಳ್ಳುವುದಿಲ್ಲ. ನಿಮ್ಮ ಸೇವಕನಾಗಿ ಕೆಲಸ ಮಾಡುತ್ತೇನೆ ಎಂದು ಹೇಳಿದರು.

---

## ನಿಧನ ವಾರ್ತೆ



### ವಿಜಯಕುಮಾರ ಹಳ್ಯಾಳ

ಮುಳಗುಂದ: ಪಟ್ಟಣದ ಸಮೀಪದ ಚಿಂಚಲಿ ಗ್ರಾಮದ ವಿಜಯಕುಮಾರ ಹಳ್ಯಾಳ (43) ಶನಿವಾರ ನಿಧನರಾಗಿದ್ದಾರೆ. ಮೃತರು ಪತ್ನಿ ಹಾಗೂ ಅಪಾರ ಬಂಧು-ಬಳಗ ಅಗಲಿದ್ದಾರೆ.

---

## ತಾಂಡಾಗಳಲ್ಲಿ ಡಾ.ಚಂದ್ರು ಲಮಾಣಿ ಪ್ರಚಾರ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಪರ ಶಾಸಕ ಡಾ.ಚಂದ್ರು ಲಮಾಣಿ ಶನಿವಾರ ತಾಲೂಕಿನ ವಿವಿಧ ತಾಂಡಾ ಮತ್ತು ಗ್ರಾಮಗಳಲ್ಲಿ ಪ್ರಚಾರ ಕಾರ್ಯ ಕೈಗೊಂಡರು.

ಆದ್ರಳ್ಳಿ ತಾಂಡಾದಲ್ಲಿ ಸೇರಿದ್ದ ಮತದಾರರನ್ನುದ್ದೇಶಿಸಿ ಮಾತನಾಡಿದ ಅವರು, ಜಾತಿ, ಮತ, ಧರ್ಮ ಬೇಧ ಎಣಿಸದೇ ದೇಶದ ಸರ್ವತೋಮುಖ ಅಭಿವೃದ್ಧಿಗಾಗಿ ಸಮರ್ಪಿಸಿಕೊಂಡ ಮೋದಿಯವರು ಪ್ರಧಾನಿಯಾಗಿರುವುದು ನಮಗೆಲ್ಲ ಹೆಮ್ಮೆ. ದೇಶಕ್ಕೆ ಸಮರ್ಥ ನಾಯಕನನ್ನು ಆಯ್ಕೆ ಮಾಡಬೇಕಾಗಿದೆ. ಸಮರ್ಥ ನಾಯಕರಾಗಿರುವ ನರೇಂದ್ರ ಮೋದಿ ಅವರು ಮತ್ತೊಮ್ಮೆ ಪ್ರಧಾನಿಯಾಗಿ ಆಯ್ಕೆಯಾಗಬೇಕು.



ನರೇಂದ್ರ ಮೋದಿ ನೇತೃತ್ವದ ಸರ್ಕಾರ ರೈತರ ಕಲ್ಯಾಣಕ್ಕೆ ಒತ್ತು ನೀಡಿದ್ದು, ಮಹಿಳೆಯರ ಕಲ್ಯಾಣಕ್ಕಾಗಿ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ. ದೇಶವೇ ಕುಟುಂಬವೆಂದು ಭಾವಿಸಿ ಪ್ರತಿ ಮನೆಗಳಿಗೂ ಒಂದಿಲ್ಲೊಂದು ಮಹತ್ವದ ಯೋಜನೆಗಳನ್ನು ಕೊಡಮಾಡುವ ಮೂಲಕ ಜನಸಾಮಾನ್ಯರ ಹೃದಯದಲ್ಲಿ ವಿಶೇಷ ಸ್ಥಾನ ಪಡೆದಿರುವ ಪ್ರಧಾನಿ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿ ಮಾಡಲು ಜನತೆ ಬಿಜೆಪಿಗೆ ಮತದಾನ ಮಾಡುವಂತೆ ಮನವಿ ಮಾಡಿದರು.

ಸಭೆಯಲ್ಲಿ ಶಿವಣ್ಣ ಲಮಾಣಿ, ದೇವಪ್ಪ ಲಮಾಣಿ, ಮಲ್ಲೇಶಪ್ಪ ಲಮಾಣಿ, ಟೋಪಣ್ಣ ಲಮಾಣಿ ಸೇರಿ ತಾಂಡಾಗಳ ನಾಯಕರು, ಡಾವ್, ಕಾರಬಾರಿ ಗುರು ಹಿರಿಯರು ಪಕ್ಷದ ಮುಖಂಡರು, ವಿವಿಧ ಮೋರ್ಚಾದ ಪ್ರಮುಖರು, ಚುನಾಯಿತ ಪ್ರತಿನಿಧಿಗಳು, ಪದಾಧಿಕಾರಿಗಳು, ಕಾರ್ಯಕರ್ತರು, ಪಕ್ಷದ ಅಭಿಮಾನಿಗಳು ಇದ್ದರು.

---

## ಯೋಚಿಸಿ ಮತ ಚಲಾಯಿಸಿ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಧಾರ್ಮಿಕ, ಸಾಂಸ್ಕೃತಿಕ ಶ್ರೀಮಂತಿಕೆಗೆ ಸಾಕ್ಷಿಯಾದ ಭಾರತವಿಂದು ವಿಶ್ವಗುರು ಮತ್ತು ಆರ್ಥಿಕ ಅಭಿವೃದ್ಧಿಯಲ್ಲಿ ಅಗ್ರಪಂಕ್ತಿಗೆ ಸೇರಿ, ದೇಶದ ಸರ್ವಾಂಗೀಣ ಅಭಿವೃದ್ಧಿ ಹಾಗೂ ಉತ್ತಮ ಭವಿಷ್ಯಕ್ಕಾಗಿ ನರೇಂದ್ರ ಮೋದಿ ಮತ್ತೊಮ್ಮೆ ಪ್ರಧಾನಿಯಾಗಬೇಕು. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಯೋಚಿಸಿ ಬಿಜೆಪಿಗೆ ಮತ ನೀಡಬೇಕಿದೆ ಎಂದು ಜಿ.ಪಂ ಮಾಜಿ ಸದಸ್ಯ ಎಂ.ಎಸ್ ದೊಡ್ಡಗೌಡರ ಹೇಳಿದರು.

ಅವರು ಶನಿವಾರ ತಾಲೂಕಿನ ಅಡರಕಟ್ಟಿ, ಕುಂದ್ರಳ್ಳಿ, ನಾದಿಗಟ್ಟಿ, ಸಂಕದಾಳ ಸೇರಿ ವಿವಿಧ ಗ್ರಾಮಗಳಲ್ಲಿ ಬಸವರಾಜ ಬೊಮ್ಮಾಯಿ ಪರ ಪ್ರಚಾರ ನಡೆಸಿ ಮಾತನಾಡಿದರು.



ಪಕ್ಷದ ಯುವ ಮುಖಂಡ ಮಂಜುನಾಥ ಮಾಗಡಿ ಮಾತನಾಡಿ, ಬಡವರು, ರೈತರು, ಮಹಿಳೆಯರು, ವಿದ್ಯಾರ್ಥಿಗಳು ಸೇರಿ ದೇಶದ ಎಲ್ಲ ವರ್ಗದ ಜನರ ಕಲ್ಯಾಣಕ್ಕಾಗಿ ಪ್ರಧಾನಿ ಮೋದಿಯವರು ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಪ್ರಬುದ್ಧರಾದ ಮತದಾರರು ಕ್ಷಣಿಕ ಆಮಿಷಕ್ಕೊಳಗಾಗದೇ ಜಾತಿ, ಧರ್ಮ ಬೇದ-ಭಾವ ಬದಿಗೊತ್ತಿ ದೇಶಕ್ಕಾಗಿ ಬಿಜೆಪಿಗೆ ಮತ ನೀಡೋಣ ಎಂದರು.

ಈ ವೇಳೆ ಶಂಕ್ರಣ್ಣ ಕಾಳೆ, ಹಾಲಪ್ಪ ಸೂರಣಗಿ, ಅಭಯ ಜೈನ್, ಚಂದ್ರು ಮಾಗಡಿ, ಯಲ್ಲಪ್ಪಗೌಡ ಪಾಟೀಲ, ಮಲ್ಲಿಕಾರ್ಜುನ ನೀರಾಲೋಟಿ ಸೇರಿ ಹಲವರಿದ್ದರು.

---

### ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತ ಸೂರಳ್ಕರ್ ವಿಕಾಸ್ ಕಿಶೋರ್ ಭರವಸೆ

## ಜಿಲ್ಲಾ ಪತ್ರಿಕೆಗಳ ಜಾಹೀರಾತು ದರ ಶೀಘ್ರ ಹೆಚ್ಚಳ

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕಳೆದ ಒಂದು ವರ್ಷದಿಂದ ನೆನೆಗುದಿಗೆ ಬಿದ್ದಿರುವ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳ ಶೇ.12 ರಷ್ಟು ಜಾಹೀರಾತು ದರವನ್ನು ಶೀಘ್ರವೇ ಹೆಚ್ಚಳ ಮಾಡಲಾಗುವುದೆಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತರಾದ ಸೂರಳ್ಕರ್ ವಿಕಾಸ್ ಕಿಶೋರ್ ಭರವಸೆ ನೀಡಿದರು.

ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯಾಧ್ಯಕ್ಷ ಎ.ಸಿ.ತಿಪ್ಪೇಸ್ವಾಮಿ ಅವರ ನೇತೃತ್ವದಲ್ಲಿ ಶನಿವಾರ ಮಧ್ಯಾಹ್ನ ಆಯುಕ್ತರನ್ನು ಭೇಟಿ ಮಾಡಿದ ಪದಾಧಿಕಾರಿಗಳು, ಈ ಹಿಂದಿನ ಆಯುಕ್ತರೊಂದಿಗೆ ಸಂಘದ ಪದಾಧಿಕಾರಿಗಳು ಸಭೆ ನಡೆಸಿ ಸಲ್ಲಿಸಲಾದ ಮನವಿಯಲ್ಲಿನ ಬೇಡಿಕೆಗಳ ಕುರಿತು ಆಯುಕ್ತರ ಗಮನಕ್ಕೆ ತರಲಾಯಿತು. ಸಂಘದ ಯಾವೊಂದು ಬೇಡಿಕೆಗಳನ್ನು ಸಹ ಇದುವರೆಗೆ ಇಲಾಖೆ ಈಡೇರಿಸದ ಬಗ್ಗೆ ಬೇಸರ ವ್ಯಕ್ತಪಡಿಸಿದ ಸಂಘದ ಪದಾಧಿಕಾರಿಗಳು, ಕೂಡಲೇ ಜಾಹೀರಾತು ದರ ಹೆಚ್ಚಳ, ಇಲಾಖೆಯಲ್ಲಿ ಹೊಸದಾಗಿ ಸೇರಿರುವ ಎಸ್ ಸಿ/ಎಸ್ ಟಿ/ಒಬಿಸಿ ಪತ್ರಿಕೆಗಳಿಗೆ ಮಾಸಿಕ ಒಂದು ಪುಟ ಜಾಹೀರಾತು ನೀಡುವ ಕುರಿತು ಕ್ರಮಕೈಗೊಳ್ಳುವಂತೆ ಮನವಿ ಮಾಡಲಾಯಿತು.



ಇನ್ನು ಇಲಾಖೆಯಿಂದ ಜಾಹೀರಾತು ಸಂಸ್ಥೆಗಳಿಗೆ ಹಣ ಪಾವತಿಯಾಗಿದ್ದರೂ ಕೂಡ ಪತ್ರಿಕೆಗಳಿಗೆ ಕೆಲವು ಏಜೆನ್ಸಿಗಳು ಹಣ ಪಾವತಿ ಮಾಡದಿರುವ ಕುರಿತು ಆಯುಕ್ತರ ಗಮನಕ್ಕೆ ತರಲಾಯಿತು. ಇಲಾಖೆ ಏಜೆನ್ಸಿಗಳ ಮೂಲಕ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಬಿಡುಗಡೆ ಮಾಡುವ ಜಾಹೀರಾತುಗಳಿಗೆ ಸಂಬಂಧಿಸಿದಂತೆ ಪತ್ರಿಕೆಗಳು ಏಜೆನ್ಸಿಗಳಿಗೆ ಶೇ.15 ರಷ್ಟು ಕಮಿಷನ್ ನೀಡದಿರುವ ಬಗ್ಗೆ ಕ್ರಮ ಕೈಗೊಳ್ಳುವಂತೆ ವಿನಂತಿ ಮಾಡಲಾಯಿತು. ಒಂದು ವೇಳೆ ಕಮಿಷನ್ ಕೊಡಲೇಬೇಕೆಂದರೆ ಪತ್ರಿಕೆಗಳಿಗೆ ಏಜೆನ್ಸಿಗಳು ಹಣ ಕೊಡಬೇಕಾದ ಅವಧಿಯನ್ನ ನಿಗಧಿಪಡಿಸಿ ಇಲಾಖೆಯಿಂದ ಆದೇಶ ಹೊರಡಿಸುವಂತೆ ಕೋರಲಾಯಿತು.

ಸಂಘದ ಮನವಿ ಸ್ವೀಕರಿಸಿ ಶಾಂತ ರೀತಿಯಿಂದ ಬೇಡಿಕೆಗಳ ಕುರಿತು ಆಲಿಸಿ ಅದಕ್ಕೆ ಸ್ಪಂದಿಸಿದ ಆಯುಕ್ತರು, ನನ್ನ ಅಧಿಕಾರದ ಹಂತದಲ್ಲಿ ಕ್ರಮಕೈಗೊಳ್ಳಬೇಕಾದ ನಿಮ್ಮ ಸಂಘದ ಬೇಡಿಕೆಗಳಿಗೆ ಚುನಾವಣೆ ಮುಗಿದ ತಕ್ಷಣ ಮುಂದಿನ ಒಂದು ವಾರದೊಳಗೆ ಖಂಡಿತ ಕ್ರಮತೆಗೆದುಕೊಳ್ಳುತ್ತೇನೆ ಎಂಬ ಭರವಸೆಯನ್ನು ಸಂಘದ ನಿಯೋಗಕ್ಕೆ ಆಯುಕ್ತರು ನೀಡಿದರು.

ಆಯುಕ್ತರ ಭರವಸೆಯಿಂದ ಮತ್ತು ಒಂದು ವರ್ಷದಿಂದ ನೆನೆಗುದಿಗೆ ಬಿದ್ದಿರುವ ಜಾಹೀರಾತು ದರ ಹೆಚ್ಚಳ, ಎಸ್ಸಿ, ಎಸ್ಟಿ, ಒಬಿಸಿ, ಬ್ರಾಹ್ಮಣ ಸಂಪಾದಕತ್ವದ ಪತ್ರಿಕೆಗಳಿಗೆ ಜಾಹೀರಾತು ನೀಡಿಕೆ, ಐದು ವರ್ಷ ಪೂರೈಸಿರುವ ಒಬಿಸಿ ಪತ್ರಿಕೆಗಳಿಗೆ ಎರಡು ಪುಟಗಳ ಜಾಹೀರಾತು ಕೊಡುವ ಕಡತಗಳಿಗೆ ಮತ್ತು ಬಾಕಿ ಉಳಿದಿರುವ ಪತ್ರಿಕೆಗಳ ಕಡತಗಳಿಗೆ ಮುಕ್ತಿ ಸಿಗಬಹುದೆಂಬ ಆಶಾಭಾವನೆ ಸಂಘದ ಪದಾಧಿಕಾರಿಗಳಿಗೆ ಮೂಡಿತು.

ಕೊಪ್ಪಳ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಅವರ ನೇತೃತ್ವದಲ್ಲಿ ಇಲಾಖೆ ಆಯುಕ್ತರನ್ನು ಬಿಬಿಎಂಪಿ ಕಚೇರಿಯಲ್ಲಿ ಶುಕ್ರವಾರ ಭೇಟಿ ಮಾಡಿ ಸಂಘದ ಬೇಡಿಕೆಗಳ ಕುರಿತು ಸಹ ಚರ್ಚಿಸಲಾಗಿತ್ತು.

ಶನಿವಾರ ಕೂಡ ಬೆಳಿಗ್ಗೆ ಭೇಟಿ ಮಾಡಿದ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳಿಗೆ ಮಧ್ಯಾಹ್ನ ಭೇಟಿ ಮಾಡಿ ಚರ್ಚಿಸುವಂತೆ ಆಯುಕ್ತರು ತಿಳಿಸಿದ್ದರಿಂದ ಸಂಘದ ಪದಾಧಿಕಾರಿಗಳಾದ ಮಹಮದ್ ಯೂನುಸ್, ಜಿ.ವೈ ಪದ್ಮಾ ನಾಗರಾಜ್, ಹೆಚ್.ನರಸಿಂಹರಾಜು, ಕೆ. ಎಸ್. ಸ್ವಾಮಿ, ದಾವಣಗೆರೆ ಜಿಲ್ಲಾ ಘಟಕದ ಕಾರ್ಯದರ್ಶಿ ಗೋವಿಂದರಾಜು ಅವರೊಂದಿಗೆ ಭೇಟಿ ಮಾಡಿ ಚರ್ಚಿಸಲಾಯಿತು.

---

## ಸಾರ್ವಜನಿಕರ ಗಮನಕ್ಕೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಲೋಕಸಭಾ ಚುನಾವಣೆ-2024ರ ಮತದಾನ ಮೇ 7ರಂದು ನಡೆಯಲಿದ್ದು, ಅಂದು ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಾರ್ಮಿಕರಿಗೆ ಮತದಾನ ಮಾಡಲು ಅನುಕೂಲವಾಗುವಂತೆ ವೇತನ ಸಹಿತ ರಜೆ ನೀಡುವಂತೆ ಚುನಾವಣಾ ಆಯೋಗದ ಹಾಗೂ ಕಾರ್ಮಿಕ ಇಲಾಖೆಯ ಆಯುಕ್ತರ ನಿರ್ದೇಶನವಿರುತ್ತದೆ.

ಕಾರ್ಖಾನೆಗಳು, ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು ಹಾಗೂ ಇತರ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1951ರ ಪ್ರಜಾ ಪ್ರತಿನಿಧಿ ಕಾಯ್ದೆ, ಸೆಕ್ಷನ್ 135(ಬಿ) ಅಡಿ ಹಾಗೂ ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಮತ್ತು ಹಬ್ಬದ ರಜೆಗಳು) ಕಾಯ್ದೆ 1963 ಕಲಂ 3(ಎ) ಅನ್ವಯ ಕಾರ್ಮಿಕರಿಗೆ ವೇತನ ಸಹಿತ ರಜೆ ಮಂಜೂರು ಮಾಡಿ ಕಡ್ಡಾಯವಾಗಿ ಮತವನ್ನು ಚಲಾಯಿಸುವುದಕ್ಕಾಗಿ ಎಲ್ಲಾ ಮಾಲೀಕರು, ನಿಯೋಜಕರು ಅನುವು ಮಾಡಿಕೊಡಬೇಕಿದೆ.

ಚುನಾವಣೆ ನಡೆಯುವ ಕ್ಷೇತ್ರಗಳ ವ್ಯಾಪ್ತಿಯ ಎಲ್ಲಾ ಕಾರ್ಖಾನೆಗಳು, ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಮತದಾನದಂದು ಕಾಯ್ದೆಯನ್ವಯ ಅರ್ಹ ಕಾರ್ಮಿಕರು ಮತದಾನ ಮಾಡಲು ಅನುಕೂಲವಾಗುವಂತೆ ವೇತನ ಸಹಿತ ರಜೆ ನೀಡಬೇಕು. ತಪ್ಪಿದ್ದಲ್ಲಿ ಸಂಬಂದಪಟ್ಟ ಸಂಸ್ಥೆ ನಿಯೋಜಕರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಬಿ.ಆರ್. ಜಾಧವ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

## ಮತಕೇಂದ್ರಗಳಿಗೆ ಪ್ರಥಮ ಚಿಕಿತ್ಸಾ ಕಿಟ್ ವಿತರಣೆ




■ **ವಿಜಯಸಾಕ್ಷಿ ಸುದ್ದಿ, ಧಾರವಾಡ**

ಸಾರ್ವತ್ರಿಕ ಲೋಕಸಭಾ ಚುನಾವಣೆಯ ಪ್ರಯುಕ್ತ ಮತದಾನ ನಡೆಯುವ ದಿನದಂದು ತುರ್ತು ವೈದ್ಯಕೀಯ ಚಿಕಿತ್ಸೆಗಾಗಿ 1,652 ಮತದಾನ ಕೇಂದ್ರಗಳಿಗೆ 1,268 ವೈದ್ಯಕೀಯ ತಂಡಗಳನ್ನು ನಿಯೋಜಿಸಿ, 1,850 ಪ್ರಥಮ ಚಿಕಿತ್ಸಾ ಕಿಟ್‌ಗಳನ್ನು ಅವಶ್ಯಕ ಔಷಧಿಗಳೊಂದಿಗೆ ಸಿದ್ಧಗೊಳಿಸಿ ಪೂರೈಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮೇ. 7ರ ಮತದಾನ ದಿನದಂದು ಚುನಾವಣಾ ಕರ್ತವ್ಯನಿರತ ಸಿಬ್ಬಂದಿ ಹಾಗೂ ಮತದಾರರ ಆರೋಗ್ಯ ಕಾಳಜಿ, ಅಗತ್ಯವೆನಿಸಿದರೆ ಪ್ರಾಥಮಿಕ ಚಿಕಿತ್ಸೆ ನೀಡಲು ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಶಶಿ ಪಾಟೀಲ ಅವರ ನೇತೃತ್ವದಲ್ಲಿ ಅಗತ್ಯ ಸಿದ್ಧತೆ, ಆರೋಗ್ಯ ಸಿಬ್ಬಂದಿಗಳ ನೇಮಕ ಮತ್ತು ಆಂಬ್ಯುಲೆನ್ಸ್‌ಗಳನ್ನು ನಿಯೋಜನೆ ಮಾಡಲಾಗಿದೆ. ಪ್ರತಿ ಮತಗಟ್ಟೆಗಳ ವೈದ್ಯಕೀಯ ಮೇಲ್ವಿಚಾರಣೆಗಾಗಿ 55 ಸೆಕ್ಟರಲ್ ಅಧಿಕಾರಿಗಳನ್ನು, 10 ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ ಎಂದು ತಿಳಿಸಿದ್ದಾರೆ.

ಮತದಾನ ಕೇಂದ್ರಗಳಿಗೆ ಸಾಕಷ್ಟು ಪ್ರಮಾಣದಲ್ಲಿ ಓಆರ್‌ಎಸ್ ಪಾಕೇಟ್‌ಗಳನ್ನು ನೀಡಲಾಗಿದೆ. ಉಷ್ಣತೆಯಿಂದ ಸಂಭವಿಸುವ ಕಾಯಿಲೆಗಳಿಗೆ ಅಗತ್ಯವಿರುವ ಔಷಧಿಗಳ ದಾಸ್ತಾನುಗಳನ್ನು ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಮತ್ತು ತಾಲೂಕಾ ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆಯಲ್ಲಿ ಇಡಲಾಗಿದೆ. ವಿಶೇಷ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆ ಧಾರವಾಡದಲ್ಲಿ ಐದು ಹಾಸಿಗೆಗಳನ್ನು, ಸಾರ್ವಜನಿಕ ಆಸ್ಪತ್ರೆಗಳಲ್ಲಿ ತಲಾ ಎರಡು ಹಾಸಿಗೆಗಳನ್ನು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ತಲಾ ಒಂದು ಹಾಸಿಗೆಗಳನ್ನು ಕಾಯ್ದಿರಿಸಲಾಗಿದೆ ಎಂದು ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

---

## ಕೈಮಗ್ಗ ನೇಕಾರರಿಗೆ ರಾಜ್ಯ ಮಟ್ಟದ ಪ್ರಶಸ್ತಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಕೈಮಗ್ಗ ಮತ್ತು ಜವಳಿ ಇಲಾಖೆಯ ಕೈಮಗ್ಗ ನೇಕಾರರಿಗೆ ಪ್ರತಿ ವರ್ಷ ರಾಷ್ಟ್ರೀಯ ಕೈಮಗ್ಗ ದಿನಾಚರಣೆ (7ನೇ ಆಗಸ್ಟ್)ರಂದು ಕೈಮಗ್ಗ ಉತ್ಪನ್ನ ಅಭಿವೃದ್ಧಿಗಾಗಿ ಕೈಮಗ್ಗ ನೇಯ್ಗೆ ವೃತ್ತಿಯಲ್ಲಿ ನೈಪುಣ್ಯತೆ/ಶ್ರೇಷ್ಠತೆ/ತಾಂತ್ರಿಕತೆ/ಉತ್ಕೃಷ್ಟತೆ ಹೊಂದಿರುವ ಕೈಮಗ್ಗ ನೇಕಾರರಿಗೆ ರಾಜ್ಯ ಮಟ್ಟದ ಪ್ರಶಸ್ತಿ ನೀಡಲು ಉದ್ದೇಶಿಸಲಾಗಿದೆ.

ಈ ಹಿನ್ನೆಲೆಯಲ್ಲಿ ತಮ್ಮ ಸಹಕಾರ ಸಂಘದ ವ್ಯಾಪ್ತಿಯಡಿ ರಾಜ್ಯಮಟ್ಟದ ಪ್ರಶಸ್ತಿಗಾಗಿ ವಿನೂತನ ಮಾದರಿಯ ಮಾರುಕಟ್ಟೆಯಲ್ಲಿ ಬೇಡಿಕೆ ಪಡೆಯುವಂತಹ ಕೈಮಗ್ಗ ಉತ್ಪನ್ನಗಳನ್ನು ಆಯ್ಕೆ ಮಾಡಿ ಉತ್ಪನ್ನಗಳ ತಾಂತ್ರಿಕ ವಿಶೇಷತೆಗಳನ್ನೊಳಗೊಂಡ ಟಿಪ್ಪಣಿ ಹಾಗೂ ಉತ್ಪನ್ನಗಳನ್ನು ತಯಾರಿಸುವ ಕುರಿತು ವಿಡಿಯೋದೊಂದಿಗೆ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರ ಕಛೇರಿಗೆ ಸಲ್ಲಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ನಂ-206, 2ನೇ ಮಹಡಿ, ಜಿಲ್ಲಾಡಳಿತ ಭವನ-ಗದಗ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ.

ಮತದಾರರಲ್ಲಿ ಹುಮ್ಮಸು ಮೂಡಿಸಿದ ತಾಲೂಕು ಸ್ವೀಪ್ ಕಾರ್ಯಚಟುವಟಿಕೆ

# ಮತಗಟ್ಟೆಗಳಲ್ಲಿ ಚಿತ್ತಾರಗಳ ಆಕರ್ಷಣೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕು ವ್ಯಾಪ್ತಿಯಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ, ತಾಲೂಕು ಸ್ವೀಪ್ ಸಮಿತಿ ಮತದಾರರನ್ನು ಆಕರ್ಷಿಸಲು ವಿಶೇಷ ಪ್ರಯತ್ನಕ್ಕೆ ಮುಂದಾಗಿದೆ. ಪಾರಂಪರಿಕ ವೃತ್ತಿ, ಸಾಂಸ್ಕೃತಿಕ ಕಲೆ ಹಾಗೂ ಸ್ಥಳೀಯರ ಅಭಿಲಾಷೆಯನ್ನರಿತು ಮತದಾನ ಕೇಂದ್ರಗಳನ್ನು ವಿಶೇಷ ಚಿತ್ತಾರಗಳಿಂದ ಕಂಗೊಳಿಸುವಂತೆ ಮಾಡಲಾಗಿದೆ.


ಲಕ್ಷ್ಮೇಶ್ವರ ತಾಲೂಕು ವ್ಯಾಪ್ತಿಯ ಪುರಸಭೆ ಹಾಗೂ ಗ್ರಾಮೀಣ ಭಾಗಗಳು ಸೇರಿ ಒಟ್ಟು 5 ಮತಗಟ್ಟೆಗಳನ್ನು ಆಕರ್ಷಕಗೊಳಿಸಲು ಯೋಜನೆ ರೂಪಿಸಲಾಗಿತ್ತು. ಇದಕ್ಕಾಗಿ ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಜಿಲ್ಲಾಡಳಿತ ಮೂರು ಥೀಮ್ (ವಿಷಯ)ಗಳನ್ನು ಆಯ್ಕೆ ಮಾಡಿ, ಮತಗಟ್ಟೆಗಳನ್ನು ಪೇಂಟಿಂಗ್ ಮೂಲಕ ಆಕರ್ಷಕಗೊಳಿಸಿದೆ. ಸಖಿ ಮತಗಟ್ಟೆ, ಯುವ ಮತಗಟ್ಟೆ ಮತ್ತು ಶಿಗ್ಲಿ ಗ್ರಾಮದ ಪಾರಂಪರಿಕ ವೃತ್ತಿಯಾದ ನೇಕಾರಿಕೆಯ ಚಿತ್ರಗಳ ಕಣ್ಮನ ಸೆಳೆಯುವಂತಿವೆ.

ಪಾರಂಪರಿಕ ಮತಗಟ್ಟೆ: ಶಿಗ್ಲಿ ಗ್ರಾಮದ ಮತಗಟ್ಟೆ ಸಂಖ್ಯೆ-202, 203 ಮತ್ತು 204 ಗಳನ್ನು ಪಾರಂಪರಿಕ ಮತಗಟ್ಟೆಗಳಾಗಿ ರೂಪಿಸಲಾಗಿದೆ. ಸ್ಥಳೀಯ ಪಾರಂಪರಿಕ




ಕೈಮಗ್ಗದ ನೇಕಾರಿಕೆ ವೃತ್ತಿಯ ಚಿತ್ರಗಳಿಗೆ ಇಲ್ಲಿ ಆದ್ಯತೆ ನೀಡಲಾಗಿದೆ. ಶಿಗ್ಲಿ ಸೀರೆಯಿಂದಲೇ ಹೆಸರುವಾಸಿಯಾದ ಗ್ರಾಮ ಇದಾಗಿದ್ದು, ಈಗಲೂ ಇಲ್ಲಿನ ನೂರಾರು ಕುಟುಂಬಗಳು ಕೈಮಗ್ಗ ನೇಕಾರಿಕೆ ವೃತ್ತಿಯನ್ನು ಮುಂದುವರಿಸಿಕೊಂಡು ಬಂದಿವೆ. ಸ್ಥಳೀಯರ ಆಶಯಕ್ಕೆ ತಕ್ಕಂತೆ ಇಲ್ಲಿನ ಮೂರು ಮತಗಟ್ಟೆಗಳನ್ನು ಮಾದರಿ ಮತಗಟ್ಟೆಗಳಾಗಿ ಚಿತ್ರರೂಪದಲ್ಲಿ ಕಂಗೊಳಿಸಲಿವೆ. ಶಿಗ್ಲಿ ಸೀರೆ ತಯಾರಿಕೆ-ಯ ಕೈಮಗ್ಗ ಮಾದರಿ ಹಾಗೂ ಸಿದ್ದವಾದ ಸೀರೆಯ ಆಕೃತಿಗಳು ಮತಗಟ್ಟೆಯ ಗೋಡೆಯ ಮೇಲೆ ಬಣ್ಣದ ರೂಪ ಪಡೆದು ಚಿತ್ತಾಕರ್ಷಕವಾಗಿವೆ. ಮತದಾನ ಜಾಗೃತಿಯ ಸಾಲುಗಳು ಮತದಾರರಲ್ಲಿ ಮತದಾನ ಮಾಡಬೇಕೆಂಬ ಪ್ರಜ್ಞೆ ಜಾಗೃತಗೊಳಿಸಲು ಪೂರಕವಾಗಿವೆ.

ಸಖಿ ಮತಗಟ್ಟೆ: ನಗರದ ಬಸ್ತಿಬಣ ಪ್ರದೇಶದಲ್ಲಿಯ ಮತಗಟ್ಟೆ ಸಂಖ್ಯೆ-108 ಸರಕಾರಿ ಮಾದರಿ ಪ್ರಾಥಮಿಕ ಶಾಲೆ ನಂ-4 ಅನ್ನು ಸಖಿ ಮತಗಟ್ಟೆಯಾಗಿ ಚಿತ್ರಿಸಲಾಗಿದೆ. ಸಂಪೂರ್ಣ ಮತಗಟ್ಟೆಗೆ ಗುಲಾಬಿ ಬಣ್ಣದಲ್ಲಿ ಆಕರ್ಷಿಸುತ್ತಿದ್ದು, ಮಹಿಳೆಯ ತೋರು ಬೆರಳನ್ನು ಹಣೆಯ ಸಿಂಧೂರದ ಭಾಗಕ್ಕೆ ಮತದಾನದ ಶಾಯಿ ಬರುವ ಹಾಗೆ ಚಿತ್ರಿಸಲಾಗಿದೆ. ಮತದಾನ ಪ್ರಜಾಪ್ರಭುತ್ವ ಗಟ್ಟಿಯಾಗುವ ಸಂಕೇತವನ್ನು ಸೂಚಿಸುವಂತಿದೆ. ಐತಿಹಾಸಿಕ ಮತಗಟ್ಟೆ: ಲಕ್ಷ್ಮೇಶ್ವರದ ಅಂಬೇಡ್ಕರ್ ನಗರದಲ್ಲಿರುವ ಸರಕಾರಿ ಕಿರಿಯ ಪ್ರಾಥಮಿಕ




ಶಾಲೆಯಲ್ಲಿಯ ಮತಗಟ್ಟೆ ಸಂಖ್ಯೆ-118ನ್ನು ಐತಿಹಾಸಿಕ ವಿಷಯ ಚಿತ್ರಗಳಿಂದ ಕಂಗೊಳಿಸುವಂತೆ ಮಾಡಲಾಗಿದೆ. ತಪ್ಪದೇ ಮತದಾನ ಮಾಡಿ, ಮತದಾನ ಮಾಡುವುದು ನಿಮ್ಮ ಜವಾಬ್ದಾರಿ ಮತ್ತು ಹಕ್ಕು, ಯೋಚಿಸಿ ಮತದಾನ ಮಾಡಿ, ನಿಮ್ಮ ಮತವನ್ನು ಮಾರಬೇಡಿ, ನಿಮ್ಮ ಮತ ನಾಡಿಗೆ ಹಿತ ಎಂಬ ಸಾಲುಗಳು ಮತದಾರರ ಹಕ್ಕು ಮತ್ತು ಜವಾಬ್ದಾರಿಯ ಅರಿವು ಮೂಡಿಸಲಿವೆ.

ಯುವ ಮತಗಟ್ಟೆ: ಬಟ್ಟೂರ ಗ್ರಾ.ಪಂ ವ್ಯಾಪ್ತಿಯ ಮತಗಟ್ಟೆ ಸಂಖ್ಯೆ-76 ಕುಂದ್ರಳ್ಳಿ ತಾಂಡಾದಲ್ಲಿರುವ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಮತಗಟ್ಟೆಯನ್ನು ಯುವ ಮತಗಟ್ಟೆಯನ್ನಾಗಿ ರೂಪಿಸಲಾಗಿದೆ. ಯುವ ಮತದಾರರು ಉಲ್ಲಸಿತರಾಗಿ ಮತ ಚಲಾವಣೆಯಲ್ಲಿ ತೊಡಗಿರುವಂತೆ ಚಿತ್ರರೂಪದಲ್ಲಿ ಬಿಡಿಸಲಾಗಿದೆ. ಅಲ್ಲದೆ ಯುವ ಶಕ್ತಿ ದೇಶದ ಶಕ್ತಿ, ನಿಮ್ಮ ಮತ ಮಾರಿಕೊಳ್ಳಬೇಡಿ, ನಿಮ್ಮ ಒಂದು ಮತವು ಮುಂದಿನ ದೊಡ್ಡ ಬದಲಾವಣೆಯಾಗಬಹುದು ಎಂಬ ಬರಹದ ಸಾಲುಗಳು ಯುವ ಮತದಾರರನ್ನು ಭವಿಷ್ಯದ ಕುರಿತು ಯೋಚಿಸಿ ಮತಚಲಾಯಿಸುವಂತೆ ಪ್ರೇರಣೆ ನೀಡಲಿದೆ.

> ಲೋಕಸಭೆ ಚುನಾವಣೆಗೆ ಮೇ 7ರಂದು ಮತದಾನ ಜರುಗಲಿದೆ. ಮತಗಟ್ಟೆಗಳಿಗೆ ಸ್ಥಳೀಯ ಐತಿಹಾಸಿಕ, ಪಾರಂಪರಿಕ ವೃತ್ತಿಗಳ ಚಿತ್ತಾರಳಿಂದ ಆಕರ್ಷಕಗೊಳಿಸಲಾಗಿದೆ. ಅಲ್ಲದೆ, ತಾಲೂಕು ವ್ಯಾಪ್ತಿಯಲ್ಲಿ ಈಗಾಗಲೇ ತಪ್ಪದೇ ಮತ ಚಲಾಯಿಸುವಂತೆ ಹಲವು ಕಾರ್ಯಕ್ರಮ ಹಮ್ಮಿಕೊಂಡು ಜಾಗೃತಿ ಮೂಡಿಸಲಾಗಿದೆ.
>
> **– ಕೃಷ್ಣಪ್ಪ ಧರ್ಮರ.**
> ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ.

## ಪ್ರಜಾಪ್ರಭುತ್ವ ಉಳಿಸಲು ಕಾಂಗ್ರೆಸ್‌ನ್ನು ಬೆಂಬಲಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ದೇಶದಲ್ಲಿ ಬೆವರು ಸುರಿಸಿ ದುಡಿಯುವ ವರ್ಗಕ್ಕೆ ಸೂಕ್ತ ಸ್ಥಾನಮಾನ, ಅವಕಾಶಗಳನ್ನು ದೊರಕಿಸುವ ರಾಜಕೀಯ ವಾತಾವರಣ ಬರುತ್ತದೆ ಎಂಬ ಆಶಯ ಮೂಡಿದೆ. ಎಲ್ಲೆಡೆ ಕಾಂಗ್ರೆಸ್‌ಗೆ ಪೂರಕವಾದ ವಾತಾವರಣ ನಿರ್ಮಾಣವಾಗಿದೆ ಎಂದು ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ 16ನೇ ವಾರ್ಡಿನ ಡಿಸಿ ಮಿಲ್ ರಸ್ತೆಯ ಬಾಬು ಜಗಜೀವನರಾಮ್ ಸಮುದಾಯ ಭವನದ ಎದುರು ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪ್ರಚಾರಾರ್ಥವಾಗಿ ನಡೆದ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು.

ದೇಶದ ಸಂವಿಧಾನವನ್ನು ಬದಲಾವಣೆಗೊಳಿಸುವುದಾಗಿ ಹೇಳಿಕೆ ನೀಡುತ್ತಿರುವ ಬಿಜೆಪಿ ಸರಕಾರವನ್ನು ತಿರಸ್ಕರಿಸಿ ಪ್ರಜಾಪ್ರಭುತ್ವ ಉಳಿಸಲು, ಸಂವಿಧಾನವನ್ನು ರಕ್ಷಿಸಲು ಮತದಾರರು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು, ಆಶೀರ್ವದಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಡಿ.ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಶಹರ ಅಧ್ಯಕ್ಷ ಬಿ.ಬಿ. ಅಸೂಟಿ, ಪ್ರಭು ಬುರಬುರೆ, ನಗರಸಭೆ ಸದಸ್ಯ ಕೃಷ್ಣಾ ಪರಾಪೂರ, ಸುಲೇಮಾನ್ ಚಿನ್ನೂರ, ಸೌಖತ್‌ಅಲಿ ಮುರಾದಖಾನ್, ಮಾಬುಸಾಬ್ ಸಿಪ್ಪೆಕೊಪ್ಪ, ಲಿಯಾಕತ್ ಮುಲ್ಲಾ, ಮಾರ್ತಾಂಡಪ್ಪ ಹಾದಿಮನಿ, ಮೈಲಾರಪ್ಪ ಹಾದಿಮನಿ, ವಿಶ್ವನಾಥ ಹಾದಿಮನಿ, ಹೂವಪ್ಪ ಚಂದಾವರಿ, ಎಸ್.ಎನ್. ಬಳ್ಳಾರಿ, ವಿರುಪಾಕ್ಷಪ್ಪ ರಾಮಗಿರಿ, ವಿಜಯ ಕಲ್ಮನಿ, ಯುವರಾಜ ಬಳ್ಳಾರಿ, ವಿನಾಯಕ ಪರಾಪೂರ, ನಾರಾಯಣ ದೊಡ್ಡಮನಿ, ಗೋವಿಂದರಾಜ ಬಳ್ಳಾರಿ, ನಾಗರಾಜ ಕಿನ್ನಾರಿ ಇದ್ದರು.

ಅಗಡಿ ತಾಂತ್ರಿಕ ಕಾಲೇಜಿನ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಇಓ ಕೃಷ್ಣಪ್ಪ ಧರ್ಮರ ಸಲಹೆ

## ಮತದಾನದಿಂದ ಉತ್ತಮ ಸಂದೇಶ ಸಾರಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಡೀ ಪ್ರಪಂಚದಲ್ಲಿ ಹೆಚ್ಚು ಯುವ ಸಮೂಹ ಇರುವುದು ಭಾರತದಲ್ಲಿ. ಯುವ ಪೀಳಿಗೆಯೇ ಭಾರತದ ಭವ್ಯ ಭವಿಷ್ಯದ ಹರಿಕಾರರಾಗಿದ್ದು, ಉತ್ತಮ ಸಮಾಜ/ರಾಷ್ಟ್ರ ನಿರ್ಮಾಣಕ್ಕಾಗಿ ಯುವ ಮತದಾರರು ಕಡ್ಡಾಯವಾಗಿ ಮತ ಚಲಾಯಿಸಬೇಕು ಎಂದು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಹೇಳಿದರು.

ಅವರು ಶನಿವಾರ ಪಟ್ಟಣದ ಶ್ರೀಮತಿ ಕಮಲಾ ಶ್ರೀ ವೆಂಕಪ್ಪ ಎಂ.ಅಗಡಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯಿತಿ ಹಾಗೂ ತಾಲೂಕು ಸ್ವೀಪ್ ಸಮಿತಿ ಆಶ್ರಯದಲ್ಲಿ ಲೋಕಸಭಾ ಚುನಾವಣೆ ಪ್ರಯುಕ್ತ ಹಮ್ಮಿಕೊಂಡಿದ್ದ ಮತದಾರರ ಸಹಿ ಸಂಗ್ರಹಣಾ




ಅಭಿಯಾನ ಹಾಗೂ ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ದೇಶದಲ್ಲಿ ಸಾಕಷ್ಟು ವಿದ್ಯಾವಂತರೇ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸುತ್ತಿಲ್ಲ. 18 ವರ್ಷ ಮೇಲ್ಪಟ್ಟ ಯುವಜನತೆ ಮತದಾರರ ಪಟ್ಟಿಯಲ್ಲಿಯಲ್ಲಿರುವ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು. ಇಂದಿನ ಯುವ ಪೀಳಿಗೆ ಮತದಾನದಿಂದ ದೂರ ಉಳಿಯಬಾರದು ಎಂದರು.

ವಿದ್ಯಾರ್ಥಿಗಳ ಸಹಿತ ಯುವಜನತೆಯಿಂದಲೇ ಈ ಸಮಾಜಕ್ಕೆ ಉತ್ತಮ ಸಂದೇಶ ಹೋಗಬೇಕಾದರೆ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು. ಮತದಾನದಿಂದ ದೂರ ಉಳಿಯುವವರನ್ನು ಮತದಾನ ಕೇಂದ್ರಕ್ಕೆ ಕರೆದುಕೊಂಡು ಹೋಗಿ ಮತ ಚಲಾಯಿಸುವಂತೆ ತಿಳಿ ಹೇಳಬೇಕಿದೆ ಎಂದರು.

ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ ಮಾತನಾಡಿ, ಅಗಡಿ ತಾಂತ್ರಿಕ ಮಹಾವಿದ್ಯಾಲಯ ವಿಶ್ವದಲ್ಲಿಯೇ ಉನ್ನತ ಸ್ಥಾನ ಪಡೆದಿದೆ. ಸುಶಿಕ್ಷಿತ ಯುವ ಮತದಾರರೇ ಮತದಾನದಿಂದ ದೂರ ಉಳಿಯುತ್ತಿರುವುದು ವಿಷಾದನೀಯವಾಗಿದೆ ಎಂದರು.

ಕಡ್ಡಾಯ ಮತದಾನದ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಮಹಾವಿದ್ಯಾಲಯ ಪ್ರಾಚಾರ್ಯ ಪರಶುರಾಮ ಬಾರಕಿ ಅಧ್ಯಕ್ಷತೆ ವಹಿಸಿದ್ದರು. ಡಾ.ಸುಭಾಷ್ ಮೇಟಿ, ಪ್ರೊ. ವಿಕ್ರಮ ಶಿರೋಳ, ಪ್ರೊ. ರಾಜೇಶ್ವರ ಗಾಣಗಟ್ಟಿ, ಪ್ರೊ. ಅರುಣ ತಂಡಿ, ಪ್ರೊ. ಷಣ್ಮುಖ ಜಿ, ರವಿಪ್ರಕಾಶ ಸೇರಿ ಹಲವರಿದ್ದರು. ಪ್ರೊ. ಸೋಮಶೇಖರ್ ಕೆರಿಮನಿ ನಿರೂಪಿಸಿದರು. ಪ್ರೊ. ರವಿಕುಮಾರ ಕೊಡದಾಳ ವಂದಿಸಿದರು.

## ಸ್ವೀಪ್ ಸಮಿತಿಯಿಂದ ಮತದಾನ ಜಾಗೃತಿ

■ವಿಜಯಸಾಕ್ಷಿ ಸುದ್ದಿ, ಗದಗ

ನರಗುಂದ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಕಡ್ಡಾಯ ಮತದಾನ ಜಾಗೃತಿ ಕುರಿತು ಕ್ಯಾಂಡಲ್ ಲೈಟ್ ಮತ್ತು ಮೊಬೈಲ್ ಟಾರ್ಚ್ ಬೆಳಗುವುದರ ಮೂಲಕ ಮತದಾರರಲ್ಲಿ ಮತದಾನ ಕುರಿತು ಜಾಗೃತಿ ಮೂಡಿಸಲಾಯಿತು. ನಗರದ ಕೊಟ್ನೂರು ಬಸವೇಶ್ವರ ದೇವಸ್ಥಾನದಿಂದ ಜಾಥಾ ಆರಂಭವಾಗಿ ಬಸ್ ನಿಲ್ದಾಣದ ಬಳಿಕ ಸರ್ಕಾರಿ ಶಾಲೆ0ು ಮೈದಾನದಲ್ಲಿ ಸೇರುವುದರ ಮೂಲಕ ಕ್ಯಾಂಡಲ್ ಲೈಟ್ ಬೆಳಗಲಾಯಿತು.

ತಾಲೂಕು ಪಂಚಾಯಿತಿ




ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ಸೋಮಶೇಖರ್ ಬಿರಾದಾರ ಮಾತನಾಡಿ, ಎಲ್ಲ ಮತದಾರರು ಮೇ 7ರಂದು ಎಲ್ಲೂ ವಲಸೆ ಹೋಗದೇ ಕಡ್ಡಾಯವಾಗಿ ಮತದಾನ ಮಾಡಬೇಕು. ಲೋಕಸಭೆ ಚುನಾವಣೆಯಲ್ಲಿ ಮತದಾನ ಪ್ರಮಾಣ ಹೆಚ್ಚಳವಾದಾಗ ಮಾತ್ರ ಸ್ವೀಪ್ ಸಮಿತಿ ಕಾರ್ಯ ಮತ್ತು ಉದ್ದೇಶ ಯಶಸ್ವಿಯಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕರು (ಗ್ರಾ.ಉ) ಸಂತೋಷಕುಮಾರ್ ಪಾಟೀಲ್, ಪುರಸಭೆ ಮುಖ್ಯ ಅಧಿಕಾರಿ ಅಮಿತ್ ತೇರದಾಳ, ಪುರಸಭೆ ಆರೋಗ್ಯ ನಿರೀಕ್ಷಕ ಎಸ್.ಎಸ್. ಬ್ಯಾಳಿ, ಪಶೋಸಂಗೋಪನೆ ಸಹಾಯಕ ನಿರ್ದೇಶಕ ಡಾ.ವಂಕಟೇಶ್, ತಾಲೂಕಿನ ಗ್ರಾ.ಪಂ ಪಿಡಿಓಗಳು, ಕಾರ್ಯದರ್ಶಿಗಳು, ನರೇಗಾ ಸಿಬ್ಬಂದಿ ವರ್ಗ, ಅಂಗನವಾಡಿ ಕಾರ್ಯಕರ್ತೆಯರು, ಎನ್.ಆರ್.ಎಲ್.ಎಂ ಸಿಬ್ಬಂದಿ ಭಾಗವಹಿಸಿದ್ದರು.

## ಕಾಂಗ್ರೆಸ್‌ನಿಂದ ಕ್ರಾಂತಿಕಾರಕ ಬದಲಾವಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತವು ಪ್ರಜಾಪ್ರಭುತ್ವ ದೇಶವಾಗಿದ್ದು, ಲೋಕಸಭೆ, ರಾಜ್ಯಸಭೆ ಮೂಲಕ ದೇಶದ ಆಡಳಿತ ನಡೆಯುತ್ತದೆ. ಆದರೆ, ಬಿಜೆಪಿ ಅಧಿಕಾರದ ಅವಧಿಯಲ್ಲಿ ಪ್ರಜಾಪ್ರಭುತ್ವ ಗಂಡಾಂತರದಲ್ಲಿದ್ದು, ಪ್ರಜ್ಞಾವಂತ ಮತದಾರರು ಕಾಂಗ್ರೆಸ್‌ನ್ನು ಬೆಂಬಲಿಸಬೇಕಿದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ 34-35ನೇ ವಾರ್ಡಿನ ಹುಡ್ಕೋ ಕಾಲೋನಿ ಬಯಲು ಆಂಜನೇಯ ಗುಡಿ ಹತ್ತಿರ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಪರವಾಗಿ ನಡೆದ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು.

ಸಿಎಂ ಸಿದ್ದರಾಮಯ್ಯ ನೇತೃತ್ವದ ಸರಕಾರವು ಚುನಾವಣೆಗೂ ಮುನ್ನ ಭರವಸೆ ನೀಡಿದ್ದ ಪಂಚ ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸಿ ರಾಜ್ಯದ 1.10 ಕೋಟಿ ಬಡ ಕುಟುಂಬದವರನ್ನು ಮಧ್ಯಮವರ್ಗದವರನ್ನಾಗಿ ಮಾಡಿದ್ದೇವೆ. ಇದು ಕ್ರಾಂತಿಕಾರಕ ಬದಲಾವಣೆಯಾಗಿದೆ. ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರಿಗೆ ಆಶೀರ್ವದಿಸಬೇಕು ಎಂದು ಮನವಿ ಮಾಡಿದರು.

ಶಹರ ಕಾಂಗ್ರೆಸ್ ಘಟಕದ ಅಧ್ಯಕ್ಷ ಬಿ.ಬಿ. ಅಸೂಟಿ, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಗುರಣ್ಣ ಬಳಗಾನೂರ, ನಿವೃತ್ತ ಪ್ರಾಚಾರ್ಯ ಕೆ.ಎಚ್. ಬೇಲೂರ, ಮುಖಂಡರಾದ ಡಾ. ಮ್ಯಾಗೇರಿ, ಡಿ.ಎಲ್. ನಾಯಕ, ದುರಗೇಶ ವಿಭೂತಿ, ಅನಿಲ ಗರಗ, ಮುರುಗೇಶ, ಜಿ.ಎಂ. ದಂಡಿನ, ಮೋಹನ ಭಜಂತ್ರಿ, ಹನಮಂತಪ್ಪ ಗರಗ ಸೇರಿ ಹಲವರು ಇದ್ದರು.

## ಕಡ್ಡಾಯವಾಗಿ ಮತದಾನ ಮಾಡಲು ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ



ಮೇ 7ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಎಲ್ಲ ಅರ್ಹ ಮತದಾರರು ಕಡ್ಡಾಯವಾಗಿ ಮತದಾನ ಮಾಡಲು ಯುವಜನ ಕ್ರೀಡಾ ಇಲಾಖೆಯ ನೆಹರು ಯುವ ಕೇಂದ್ರದ ಜಿಲ್ಲಾ ನಿರ್ದೇಶಕ, ಗದಗ ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಪ್ರೊ. ಕಿಶೋರಬಾಬು ನಾಗರಕಟ್ಟಿಯವರು ವಿನಂತಿಸಿದ್ದಾರೆ.

ಮತದಾನ ಎನ್ನುವುದು ಒಂದು ಪವಿತ್ರ ಕಾರ್ಯವಾಗಿದ್ದು, ಭಾರತ ದೇಶದ ಪ್ರಜೆಯಾಗಿ ನಾವು ನಮ್ಮ ಹಕ್ಕುಗಳನ್ನು ಯಾವ ರೀತಿಯಾಗಿ ಪ್ರತಿಪಾದಿಸುತ್ತೇವೆಯೋ ಅದೇ ರೀತಿಯಾಗಿ ಮತದಾನವು ನಮ್ಮ ಕರ್ತವ್ಯವಾಗಿದೆ. 5 ವರ್ಷಕ್ಕೊಮ್ಮೆ ಬರುವ ಸಾರ್ವತ್ರಿಕ ಚುನಾವಣೆಯಲ್ಲಿ ಉತ್ತಮ ವ್ಯಕ್ತಿಗೆ ಮತದಾನ ಮಾಡುವ ಮೂಲಕ ನಮ್ಮ ಪ್ರತಿನಿಧಿಯನ್ನು ಆಯ್ಕೆ ಮಾಡುವುದು ನಮ್ಮ ಆದ್ಯ ಕರ್ತವ್ಯವಾಗಿದೆ.

ಆದ್ದರಿಂದ ಮತದಾನದ ದಿನದಂದು ವೈಯಕ್ತಿಕ ಕೆಲಸಗಳನ್ನು ಬದಿಗಿಟ್ಟು, 'ಸದೃಢ ಸಮಾಜಕ್ಕಾಗಿ ಮೊದಲು ನನ್ನ ಮತ' ಎನ್ನುವುದನ್ನು ಮನದಲ್ಲಿಟ್ಟುಕೊಂಡು ಮತದಾನ ಮಾಡಲು ಪ್ರೊ. ಕಿಶೋರಬಾಬು ನಾಗರಕಟ್ಟಿ ವಿನಂತಿಸಿದ್ದಾರೆ.

ಆನಂದಸ್ವಾಮಿ ಗಡ್ಡದೇವರಮಠ ಪರ ಪ್ರಚಾರ ಸಭೆಯಲ್ಲಿ ಡಿ.ಕೆ. ಶಿವಕುಮಾರ

# ಬೊಮ್ಮಾಯಿಯವರಿಗೆ ಮತ ಕೇಳುವ ಹಕ್ಕಿಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಬೊಮ್ಮಾಯಿ ಪಕ್ಕದ ಹಾವೇರಿ ಜಿಲ್ಲೆಯವರು. ಈ ಹಿಂದೆ ಮುಖ್ಯಮಂತ್ರಿ ಆಗಿದ್ದವರು. ಸದ್ಯ ಅವರು ಸ್ಪರ್ಧಿಸುತ್ತಿರುವ ಲೋಕಸಭೆ ಕ್ಷೇತ್ರ ವ್ಯಾಪ್ತಿಯ 8 ಕ್ಷೇತ್ರಗಳ ಪೈಕಿ 7ರಲ್ಲಿ ಕಾಂಗ್ರೆಸ್ ಪಕ್ಷದ ಶಾಸಕರಿದ್ದಾರೆ. ಜನ ಬಿಜೆಪಿಯನ್ನು ಸ್ಪಷ್ಟವಾಗಿ ತಿರಸ್ಕರಿಸಿದ್ದಾರೆ. ಬೊಮ್ಮಾಯಿಯವರಿಗೆ ಮತ ಕೇಳುವ ಹಕ್ಕಿಲ್ಲ ಎಂದು ಉಪ ಮುಖ್ಯಮಂತ್ರಿ, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ ಹೇಳಿದರು.

ಶನಿವಾರ ನಗರದ ಮುನ್ಸಿಪಲ್ ಕಾಲೇಜು ಮೈದಾನದಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರ ಪ್ರಚಾರ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬಸವರಾಜ ಬೊಮ್ಮಾಯಿ ನೇತೃತ್ವದಲ್ಲಿ ಬಿಜೆಪಿ ವಿಧಾನಸಭೆ ಚುನಾವಣೆ ಎದುರಿಸಿತು. ಜನ ಬೊಮ್ಮಾಯಿ ಅವರನ್ನು ತಿರಸ್ಕರಿಸಿದರು. ಹಾವೇರಿ ಜಿಲ್ಲೆಯನ್ನೇ ಗೆಲ್ಲಲಾಗದವರು ಈಗ ಹಾವೇರಿ-ಗದಗ ಲೋಕಸಭೆ ಚುನಾವಣೆಗೆ ಸ್ಪರ್ಧಿಸಿದ್ದಾರೆ. ಜನ ಬೊಮ್ಮಾಯಿ ಅವರನ್ನು ಮತ್ತೊಮ್ಮೆ ತಿರಸ್ಕರಿಸಿ, ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠರನ್ನು ಗೆಲ್ಲಿಸಿ ಎಂದು ಮನವಿ ಮಾಡಿದರು.

ಬಿಜೆಪಿ ನುಡಿದಂತೆ ನಡೆದಿಲ್ಲ. ಆ ಕಾರಣಕ್ಕಾಗಿ ಮೂರು ಬಾರಿ ಸಂಸದರಾಗಿದ್ದ ಶಿವಕುಮಾರ ಉದಾಸಿ ಸ್ಪರ್ಧೆಯಿಂದ ಹಿಂದೆ ಸರಿದರು. ಈ ಬಾರಿ ಸ್ಪರ್ಧೆ ಮಾಡಿದರೆ, ಜನ ಪ್ರಶ್ನಿಸದೇ ಬಿಡುವುದಿಲ್ಲ ಎನ್ನುವ ಭಯ ಅವರನ್ನು ಕಾಡಿತ್ತು. ಶಿವಕುಮಾರ ಉದಾಸಿ



ಮಾತ್ರವಲ್ಲ, ರಾಜ್ಯದ 14 ಜನ ಸಂಸದರು ಇದೇ ಕಾರಣಕ್ಕೆ ಸ್ಪರ್ಧೆಯಿಂದ ಹಿಂದೆ ಸರಿದಿದ್ದಾರೆ ಎಂದರು.

ಕಾಂಗ್ರೆಸ್ ಗ್ಯಾರಂಟಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಮೂಲಕ ನುಡಿದಂತೆ ನಡೆದಿದೆ. ಆದರೆ ಜೆಡಿಎಸ್ ನಾಯಕ ಕುಮಾರಸ್ವಾಮಿ ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರು ದಾರಿ ತಪ್ಪುತ್ತಿದ್ದಾರೆ ಎಂದು ಆರೋಪಿಸಿದರು. ಇಂದು ಯಾರು ದಾರಿ ತಪ್ಪಿದ್ದಾರೆ ಎನ್ನುವುದು ಇಡೀ ರಾಜ್ಯದ ಜನರಿಗೆ ಗೊತ್ತಾಗಿದೆ ಎಂದ ಡಿ.ಕೆ. ಶಿವಕುಮಾರ, ಈ ಬಾರಿ ರಾಜ್ಯದಲ್ಲಿ 20ಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲ್ಲಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸಮಾರಂಭದಲ್ಲಿ ಚಿತ್ರನಟ ಸಾಧು ಕೋಕಿಲಾ, ಸಚಿವ ಎಚ್.ಕೆ. ಪಾಟೀಲ, ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್, ಶಾಸಕ ಶ್ರೀನಿವಾಸ ಮಾನೆ, ರೋಣ ಶಾಸಕ ಹಾಗೂ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಜಿ.ಎಸ್. ಪಾಟೀಲ, ಶಾಸಕ ವಿನಯ ಕುಲಕರ್ಣಿ, ಪಾಂಡಿಚೇರಿ ಮಾಜಿ ಸಿಎಂ ನಾರಾಯಣಸ್ವಾಮಿ, ಎಐಸಿಸಿ ವೀಕ್ಷಕ, ಮಯೂರ ಕುಮಾರ ಬಿ., ನಿಕೇತರಾಜ್ ಮೌರ್ಯ, ಹಾವೇರಿ-ಗದಗ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಮುಂತಾದವರು ಉಪಸ್ಥಿತರಿದ್ದರು.

> ಗದಗ ಕ್ಷೇತ್ರದ ಮಾಜಿ ಸಚಿವ ದಿ. ಕೆ.ಎಚ್. ಪಾಟೀಲರು ನನಗೆ ಮೊದಲ ಬಾರಿಗೆ ಟಿಕೆಟ್ ಕೊಟ್ಟವರು. ಅಂದಿನಿಂದ ಇಂದಿನವರೆಗೆ ಸತತ 8 ಬಾರಿ ವಿಧಾನಸಭೆ ಪ್ರವೇಶಿಸಿ, ಗ್ಯಾರಂಟಿ ಕಾರ್ಯಕ್ರಮಗಳನ್ನು ಕೊಟ್ಟು ಜನಸೇವೆ ಮಾಡಲು ಸಾಧ್ಯವಾಯಿತು.
>
> – ಡಿ.ಕೆ. ಶಿವಕುಮಾರ.
> ಉಪ ಮುಖ್ಯಮಂತ್ರಿ, ಕೆಪಿಸಿಸಿ ಅಧ್ಯಕ್ಷ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka